ಸಂಪುಟ : 10 ಸಂಚಿಕೆ: 206 ಪುಟ : 4+2 ಬೆಲೆ: 3.00 ಬುಧವಾರ ಸೆಪ್ಟೆಂಬರ್ 24 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 206 Pages : 4+2 Price : 3.00 Wednesday September 24 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25





## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961 ಹಾಗೂ ನಿಯಮಗಳು-1963ರ ಅಡಿಯಲ್ಲಿ ನೋಂದಣಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ.

ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರು ಈಗಾಗಲೇ ತಮ್ಮ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಕಾರ್ಮಿಕ ನಿರೀಕ್ಷಕರ ಕಚೇರಿ ಗದಗ 2ನೇ ವೃತ್ತ, ಗದಗ ಇಲ್ಲಿ ನೋಂದಣಿ ಮಾಡಿಸಿಕೊಂಡ ಸಂಸ್ಥೆಗಳನ್ನು ಹೊರತುಪಡಿಸಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕಾರ್ಮಿಕರು ಇರುವ ಹಾಗೂ ಕಾರ್ಮಿಕರು ಇಲ್ಲದೇ ಇರುವ ಸಂಸ್ಥೆಗಳು ಸಹ ಕರ್ನಾಟಕ ಸರ್ಕಾರದ ಇ-ಕಾರ್ಮಿಕ ತಂತ್ರಾಂಶದಲ್ಲಿ https://www.ikarmika.karnataka.gov.in/ekarmika/static/Home-aspx ನಿಗದಿತ ಆನ್‌ಲೈನ್ ಮೂಲಕ ಶುಲ್ಕವನ್ನು ಮತ್ತು ಅವಶ್ಯಕ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ ಸಂಸ್ಥೆಗಳ ನೋಂದಣಿ ಪತ್ರ ಪಡೆದುಕೊಳ್ಳಬೇಕೆಂದು ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರಿಗೆ ತಿಳುವಳಿಕೆ ನೀಡಲಾಗಿದೆ. ತಪ್ಪಿದ್ದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಎರಡನೇ ವೃತ್ತದ ಕಾರ್ಮಿಕ ನಿರೀಕ್ಷಕರಾದ ಉಮೇಶ್ ಎಸ್ ಹುಲ್ಲಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಸರಾ ಉತ್ಸವದ ಇಂದಿನ ಕಾರ್ಯಕ್ರಮಗಳು



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಎಸ್.ಎಸ್.ಕೆ ದಸರಾ ಉತ್ಸವ ಸಮಿತಿ ಶ್ರೀ ಜಗದಂಬಾ ಮಹಿಳಾ ಮಂಡಳದ ವತಿಯಿಂದ ಶ್ರೀ ಜಗದಂಬಾ ದೇವಸ್ಥಾನದಲ್ಲಿ ಮಧ್ಯಾಹ್ನ 3 ಗಂಟೆಗೆ ಎಸ್.ಎಸ್.ಕೆ ಸಮಾಜದ ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆ, ಬೆಂಕಿ ಇಲ್ಲದೆ ಅಡುಗೆ, ಒಡಪುಗಳನ್ನು ಹೇಳುವುದು, ಟ್ವಿನ್ ಮ್ಯಾಚಿಂಗ್ ಸ್ಪರ್ಧೆ ನಡೆಯಲಿದ್ದು, ನಂತರ ಮಹಿಳಾ ಮಂಡಳದವರಿಗಾಗಿ ಪಾಸಿಂಗ್ ದ ಬಾಲ್ ಸ್ಪರ್ಧೆ ಜರುಗಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಜಗದಂಬಾ ಮಹಿಳಾ ಮಂಡಳದ ಅಧ್ಯಕ್ಷರಾದ ಸರೋಜಾ ಎಚ್. ಕಬಾಡಿ ವಹಿಸುವರು. ಮುಖ್ಯ ಅತಿಥಿಗಳಾಗಿ ಗೀತಾ ಎ.ಕಬಾಡಿ, ಲಕ್ಷ್ಮೀ ವಿ.ಮೇರವಾಡೆ ಆಗಮಿಸುವರು. ಈ ಸಂದರ್ಭದಲ್ಲಿ ಮಹಿಳಾ ಮಂಡಳದ ಸಹಕಾರ್ಯದರ್ಶಿ ಸುರೇಖಾ ಎಚ್.ಕಬಾಡಿ, ಮಹಿಳಾ ಮಂಡಳದ ಮಾಜಿ ಅಧ್ಯಕ್ಷರಾದ ಗಂಗೂಬಾಯಿ ಬಿ.ಜಿತೂರಿ, ಎಸ್.ಎಸ್.ಕೆ ಪಂಚ ಟ್ರಸ್ಟ್ ಕಮಿಟಿಯ ಅಧ್ಯಕ್ಷರಾದ ಲೋಕನಾಥ ಕಬಾಡಿ, 2025ರ ದಸರಾ ಉತ್ಸವದ ಚೇರಮನ್ ಸೋಮಶೇಖರ ಮೇರವಾಡೆ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

### 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಆಯುರ್ವೇದದಿಂದ ಆರೋಗ್ಯಕರ ಸಮಾಜ ನಿರ್ಮಾಣ

■ ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯ ಮತ್ತು ನೆಮ್ಮದಿ ಮನುಷ್ಯನ ನಿಜವಾದ ಸಂಪತ್ತುಗಳಾಗಿವೆ. ಆಯುರ್ವೇದ ಎಂದರೆ ಆರೋಗ್ಯದಿಂದಿರುವುದು ಎಂದರ್ಥ. ರೋಗ ಬಂದ ಮೇಲೆ ಚಿಕಿತ್ಸೆ ಪಡೆಯುವುದಕ್ಕಿಂತ ರೋಗ ಬಾರದಂತೆ ನಮ್ಮ ಆರೋಗ್ಯ ಕಾಪಾಡಿಕೊಳ್ಳುವುದು ಮುಖ್ಯವಾಗಿದೆ. ನಮ್ಮ ಪೂರ್ವಿಕರು ಆರೋಗ್ಯ ಕಾಪಾಡಿಕೊಳ್ಳುವುದಕ್ಕೋಸ್ಕರ ಒಳ್ಳೆಯ ಆಹಾರ, ವಿಹಾರ ಪದ್ಧತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುತ್ತಿದ್ದರು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಕೇಂದ್ರ ಹಾಗೂ ರಾಜ್ಯ ಸರ್ಕಾರ, ಆಯುಷ್ ಇಲಾಖೆ ಬೆಂಗಳೂರು, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆಯುಷ್ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ 'ಜನರಿಗಾಗಿ ಮತ್ತು ಜಗತ್ತಿಗಾಗಿ ಆಯುರ್ವೇದ' ಎಂಬ ಘೋಷವಾಕ್ಯದಡಿ 'ಶ್ರೀ ಧನ್ವಂತರಿ ಜಯಂತಿ' 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ - 2025ರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಮ್ಮ ಹಿರಿಯರು ನಿತ್ಯ ಕರ್ಮದಲ್ಲಿ ಏನು ಮಾಡಬೇಕು, ಏನು ಮಾಡಬಾರದು ಎಂದು ತಿಳಿದು ಆರೋಗ್ಯ ಕಾಪಾಡಿಕೊಳ್ಳುತ್ತಿದ್ದರು. ಆರೋಗ್ಯದ ಹಿತದೃಷ್ಟಿಯಿಂದ ಯಾವ ಋತುಗಳಿಗೆ ಏನು ತಿನ್ನಬೇಕು ಎಂದು ತಿಳಿದುಕೊಳ್ಳುತ್ತಿದ್ದರು. ಆಯುರ್ವೇದದಿಂದ ಆರೋಗ್ಯಕರ ಸಮಾಜ ನಿರ್ಮಿಸಬಹುದಾಗಿದೆ. ಮನುಷ್ಯನು



ಉತ್ಸಾಹದಿಂದಿರಲು ದೈಹಿಕ ಹಾಗೂ ಮಾನಸಿಕ ಆರೋಗ್ಯ ಎರಡೂ ಅಮೂಲ್ಯ. ಆದಕಾರಣ ಆಯುರ್ವೇದ ಪದ್ಧತಿ ಪ್ರಕಾರ ಪ್ರತಿಯೊಬ್ಬರೂ ಉತ್ತಮ ಆಹಾರ ಪದ್ಧತಿ, ಯೋಗ, ಧ್ಯಾನ ಅಳವಡಿಸಿಕೊಂಡು ಆರೋಗ್ಯಕರ ಜೀವನ ನಡೆಸಬಹುದಾಗಿದೆ ಎಂದರು. ಗದಗ - ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕೋವಿಡ್ ಸಂದರ್ಭದಲ್ಲಿ ಜಿಲ್ಲೆಯ ಆಯುಷ್ ಇಲಾಖೆಯ ವೈದ್ಯರು ಕೈಗೊಂಡ ನಿಸ್ವಾರ್ಥ ಸೇವೆಯನ್ನು ಸ್ಮರಿಸಿಕೊಂಡರು. ಪ್ರತಿಯೊಬ್ಬರೂ ಆಯುರ್ವೇದ ಔಷಧಗಳ ಸದ್ಬಳಕೆ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಜಯಪಾಲಸಿಂಗ್ ಸಮೋರೇಕರ್ ಪ್ರಾಸ್ತಾವಿಕವಾಗಿ ಮಾತನಾಡಿ, ನಾವು 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಜನರಿಗಾಗಿ ಮತ್ತು ಜಗತ್ತಿಗಾಗಿ ಆಯುರ್ವೇದ ಎಂಬ ಘೋಷವಾಕ್ಯದಡಿ ಆಚರಿಸುತ್ತಿದ್ದೇವೆ. ಆಯುರ್ವೇದ ಚಿಕಿತ್ಸೆಯಿಂದ ರೋಗಿಗಳು ಯಾವುದೇ ದುಷ್ಪರಿಣಾಮ ಇಲ್ಲದೇ ಗುಣಮುಖ ಹೊಂದಿ ಆರೋಗ್ಯಕರ ಜೀವನ ನಡೆಸಲು ಸಾಧ್ಯ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಆಯುಷ್ ಇಲಾಖೆಯ ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು. ಪಾಪನಾಶಿ ಹಾಗೂ ಅಂತೂರು-ಬೆಂತೂರು ಆಯುಷ್ಮಾನ್ ಆರೋಗ್ಯ ಮಂದಿರದ ಯೋಗ ವಿದ್ಯಾರ್ಥಿಗಳಿಂದ ಯೋಗ ಪ್ರದರ್ಶನ ಜರುಗಿತು.

ಡಾ. ಮಹೇಶ ಹಿರೇಮಠ 'ಅನಾರೋಗ್ಯದಿಂದ ಆರೋಗ್ಯದ ಕಡೆಗೆ' ವಿಷಯದ ಕುರಿತಾಗಿ ಉಪನ್ಯಾಸ ನೀಡಿದರು. ಡಾ.ಪ್ರವೀಣ ಸರ್ವದೆ 'ಬೊಜ್ಜು ನಿವಾರಣೆಯಲ್ಲಿ ಆಹಾರದ ಪಾತ್ರ' ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಆಯುಷ್ ವೈದ್ಯಾಧಿಕಾರಿಗಳು, ನ್ಯಾಷನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಷನ್ ಜಿಲ್ಲಾ ಘಟಕದವರು, ನರ್ಸಿಂಗ್ ವಿದ್ಯಾರ್ಥಿಗಳು, ವೈದ್ಯಾಧಿಕಾರಿಗಳು, ಎಸ್.ಸಿ. ತೋಟಗಂಟಿಮಠ ಕಾಲೇಜಿನ ವಿದ್ಯಾರ್ಥಿಗಳು, ಗಾಲಾ ನರ್ಸಿಂಗ್ ಇನ್ಸ್‌ಟಿಟ್ಯೂಟ್ ವಿದ್ಯಾರ್ಥಿಗಳು, ಆಯುಷ್ ಇಲಾಖೆಯವರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು. ಡಾ. ಬಿ.ಎಂ. ಲೋಕಾಪುರ ಸ್ವಾಗತಿಸಿದರು. ಡಾ. ಅಶೋಕ ಮತ್ತಿಗಟ್ಟಿ ಧ್ವನಂತರಿ ಸ್ತೋತ್ರವನ್ನು ಪಠಿಸಿದರು. ಡಾ. ನೇತ್ರಾವತಿ ರಾಯ್ಕರ್ ಪ್ರಾರ್ಥಿಸಿದರು. ಡಾ. ಸಂಜೀವ ನಾರಪ್ಪನವರ ನಿರೂಪಿಸಿದರು. ಡಾ. ಕಮಲಾಕರ ಅರಳೆ ವಂದಿಸಿದರು.

> ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ರೋಗಿಗಳಿಗೆ ಆಯುರ್ವೇದ ಚಿಕಿತ್ಸೆ ಶ್ರೇಷ್ಠ ಚಿಕಿತ್ಸೆಯಾಗಿದೆ. ಇಂದಿನ ದಿನಮಾನಗಳಲ್ಲಿ ಕಲಬೆರಕೆ ಆಹಾರದಿಂದ, ನಿಗದಿತ ಸಮಯದಲ್ಲಿ ಊಟ ಮಾಡದೇ ಇರುವುದರಿಂದ, ರೋಗ ರುಜಿನಗಳನ್ನು ನಾವೇ ಬರಮಾಡಿಕೊಳ್ಳುತ್ತಿದ್ದೇವೆ. ಆಯುರ್ವೇದ ಚಿಕಿತ್ಸೆಯಲ್ಲಿ ವಿಶೇಷ ಶಕ್ತಿಯಿದೆ. ಆಯುರ್ವೇದ ಚಿಕಿತ್ಸೆಗಳು ಪ್ರಾಚೀನ ಚಿಕಿತ್ಸೆಗಳಾಗಿದ್ದು, ರೋಗಗಳನ್ನು ಯಾವುದೇ ದುಷ್ಪರಿಣಾಮ ಇಲ್ಲದೇ ಗುಣಪಡಿಸುವ ಶಕ್ತಿ ಇದಕ್ಕಿದೆ ಎಂದು ತಿಳಿಸಿದರು.

### 14ನೇ ವರ್ಷದ ಪೌರಕಾರ್ಮಿಕ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಪೌರಕಾರ್ಮಿಕರು ಆರೋಗ್ಯಕರ ಸಮಾಜದ ಸೇನಾನಿಗಳು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪೌರ ಕಾರ್ಮಿಕರು ತಮ್ಮ ಆರೋಗ್ಯವನ್ನೂ ಲೆಕ್ಕಿಸದೇ ನಗರ, ಪಟ್ಟಣಗಳನ್ನು ಸ್ವಚ್ಛ ಮಾಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಹಗಲಿರುಳು ಶ್ರಮಿಸುವ ಸೇನಾನಿಗಳಾಗಿದ್ದಾರೆ. ಸಮಾಜ ಇವರನ್ನು ಗೌರವದಿಂದ ಕಾಣಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಮಂಗಳವಾರ ಪುರಸಭೆ ಆವರಣದಲ್ಲಿ 14ನೇ ವರ್ಷದ ಪೌರಕಾರ್ಮಿಕ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಪೌರಕಾರ್ಮಿಕರನ್ನು ಸನ್ಮಾನಿಸಿ ಮಾತನಾಡಿದರು.

ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ, ಪೂರ್ಣಿಮಾ ಪಾಟೀಲ, ಮಹೇಶ ಹೊಗೆಸೊಪ್ಪಿನ, ಮಾತನಾಡಿ, ಸ್ವಚ್ಛ ಪಟ್ಟಣ, ನಗರ ನಿರ್ಮಿಸುವಲ್ಲಿ ಪೌರ ಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರನ್ನು ಎಲ್ಲ ಕಡೆ ಕೆಲಸಕ್ಕಾಗಿ ಬಳಸಿಕೊಳ್ಳುತ್ತಿದ್ದು, ಸೌಜನ್ಯಕ್ಕಾದರೂ ಕಾರ್ಯಕ್ರಮಗಳಲ್ಲಿ ಹೂ ನೀಡುವ ಮೂಲಕ ಗೌರವಿಸುವ ಕಾರ್ಯವಾಗಲಿ ಎಂದು ಹೇಳಿದರು.

ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ



ಮಾತನಾಡಿ, ಪಟ್ಟಣದ ಜನಸಂಖ್ಯೆಗನುಗುಣವಾಗಿ ಪೌರಕಾರ್ಮಿಕರ ಅವಶ್ಯಕತೆಯಿದೆ. ಆದರೆ ನಮ್ಮಲ್ಲಿ ಸಿಬ್ಬಂದಿಗಳ ಕೊರತೆ ಕಾಡುತ್ತಿದೆ, ಪುರಸಭೆಗೆ ಒಟ್ಟು 87 ಪೌರಕಾರ್ಮಿಕರ ಹುದ್ದೆಗಳಿದ್ದು, ಅದರಲ್ಲಿ 32 ಜನರು ಮಾತ್ರ ಇದ್ದಾರೆ. ಸುಮಾರು 55 ಪೌರಕಾರ್ಮಿಕರ ಅವಶ್ಯಕತೆ ಇದ್ದು, ಇದೀಗ ನಮ್ಮಲ್ಲಿ ಕೇವಲ 7 ಜನ ಸಿಬ್ಬಂದಿಗಳಿದ್ದಾರೆ ಈ ಕುರಿತಂತೆ ಆಡಳಿತಮಂಡಳಿ ಸದಸ್ಯರು ಜಿಲ್ಲಾಧಿಕಾರಿಗಳಿಗೆ ಮನವಿ ಅರ್ಪಿಸಿದ್ದಾರೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪೌರಕಾರ್ಮಿಕರೆಲ್ಲರಿಗೂ ಸನ್ಮಾನಿಸಿ ಸರಕಾರದಿಂದ ಕೊಡಮಾಡಿದ ಚೆಕ್‌ಗಳನ್ನು ವಿತರಿಸಲಾಯಿತು. ಸಭೆಯಲ್ಲಿ ತಹಸೀಲ್ದಾರ ಧನಂಜಯ ಎಂ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಪೌರ ಕಾರ್ಮಿಕರ ಸಂಘದ ಮಾಜಿ ಅಧ್ಯಕ್ಷ ಬಸವಣ್ಣೆಪ್ಪ ನಂದೆಣ್ಣವರ, ದೇವಣ್ಣ ನಂದೆಣ್ಣವರ, ಪುರಸಭೆ ಸದಸ್ಯರಾದ ವಾಣಿ ಹತ್ತಿ, ಮಂಜುಳಾ ಗುಂಜಳ, ಶೋಭಾ ಮೆಣಸಿನಕಾಯಿ, ಕವಿತಾ ಶರಸೂರಿ, ಪೂಜಾ ಖರಾಟೆ, ಕಿರಣ ನವಲೆ, ನೀಲಪ್ಪ ಪೂಜಾರ, ಮಹಾಂತೇಶ ಗುಡಿಸಲಮನಿ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಬೆಳ್ಳಿಕೊಪ್ಪ, ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಹನುಮಂತ ನಂದೆಣ್ಣವರ, ಸುರೇಶ ಪೂಜಾರ ಹಾಗೂ ಪೌರಕಾರ್ಮಿಕರು ಹಾಜರಿದ್ದರು.

> ಸ್ಥಳೀಯ ಸಂಸ್ಥೆಗಳ ಆಧಾರ ಸ್ತಂಭಗಳಾಗಿರುವ ಪೌರ ಕಾರ್ಮಿಕರು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ತಮ್ಮನ್ನೇ ತಾವು ಸಮರ್ಪಿಸಿಕೊಂಡಿರುತ್ತಾರೆ. ಪೌರ ಕಾರ್ಮಿಕರನ್ನು ಸಮಾಜ ಗೌರವದಿಂದ ಕಾಣಬೇಕು. ಪೌರಕಾರ್ಮಿಕ ದಿನಾಚರಣೆಯಂದು ಮಾತ್ರ ಅವರನ್ನು ಗೌರವಿಸದೆ ನಿತ್ಯ ಅವರ ಬಗ್ಗೆ ಸಮಾಜ ಉತ್ತಮ ಭಾವನೆಯಿಂದ ಕಾಣಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

## ಪ್ರವಾದಿಯವರು ಮಹಾನ್ ಶಾಂತಿದೂತರು



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಇಸ್ಲಾಂ ಧರ್ಮದ ಸ್ಥಾಪಕರಾದ ಪ್ರವಾದಿ ಮುಹಮ್ಮದ್ ಪೈಗಂಬರ್ ಅವರು ಮನುಕುಲದ ಉದ್ಧಾರಕ್ಕಾಗಿ ಶ್ರಮಿಸಿದ ಮಹಾನ್ ಮಾನವತಾವಾದಿಯಾಗಿದ್ದು, ವಿಶ್ವಕ್ಕೆ ಸಮಾನತೆಯ ಸಂದೇಶ ಸಾರಿದ್ದಾರೆ ಎಂದು ಪುರಸಭೆ ಸದಸ್ಯ ಶಿವರಾಜ್ ಘೋರ್ಪಡೆ ಹೇಳಿದರು.

ನಗರದ ಟೆಕ್ಕದ ದರ್ಗಾದಲ್ಲಿ ಈದ್ ಮಿಲಾದುನ್ನಬೀ ಪ್ರಯುಕ್ತ ಆಯೋಜಿಸಿದ್ದ ಮಕ್ಕಳ ಧಾರ್ಮಿಕ ನಾಥ್ ಬಯಾನ್ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರವಾದಿ ಮುಹಮ್ಮದ್ ಪೈಗಂಬರ್ ಅವರು ಎಲ್ಲರನ್ನು ಸಮಾನವಾಗಿ ಕಾಣುವ ಮೂಲಕ ಸೌಹಾರ್ದತೆಯ ಸಂದೇಶ ನೀಡಿದವರು ಎಂದರು.

ಪ್ರಾಸ್ತಾವಿಕವಾಗಿ ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಮಾತನಾಡಿ, ಪ್ರವಾದಿ ಮುಹಮ್ಮದ್ ಪೈಗಂಬರ್ ಅವರು ಸಾಮಾಜಿಕ ಪಿಡುಗುಗಳ ವಿರುದ್ಧ ಹೋರಾಟ ನಡೆಸಿದ ವಿಶ್ವದ ಮಹಾನ್ ನಾಯಕರಾಗಿದ್ದು, ಅಸಮಾನತೆ, ಗುಲಾಮಗಿರಿ ವಿರುದ್ಧ ಸಮರ ಸಾರಿದ ಜಗತ್ತಿನ ಸರ್ವಶ್ರೇಷ್ಠ ಸಮಾಜ ಸುಧಾಕರು ಎಂದರು.

ಗಜೇಂದ್ರಗಡ ಪುರಸಭೆ ಸದಸ್ಯ ರಾಜು ಸಾಂಗ್ಲೀಕಾರ ಮಾತನಾಡಿ, 60ಕ್ಕೂ ಹೆಚ್ಚು ಮಕ್ಕಳಿಗೆ ಅರಬೀಕ್ ಮದರಸ ಹೇಳಿಕೊಡುತ್ತಿರುವ ಹಜರತ್ ನಿಜಾಮುದ್ದಿನಷಾ ಮಕಾನದಾರ ಹಾಗೂ ಟೆಕ್ಕದ ದರ್ಗಾದ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು.

60ಕ್ಕೂ ಹೆಚ್ಚು ಮಕ್ಕಳು ನಾಥ್ ಬಯಾನ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ದಿವ್ಯ ಸಾನ್ನಿಧ್ಯ ವಹಿಸಿದ ಟೆಕ್ಕದ ದರ್ಗಾದ ಹಜರತ್ ನಿಜಾಮುದ್ದಿನಷಾ ಅಶ್ರಫಿ ಮಕಾನದಾರ ಆಶೀರ್ವಚನ ನೀಡಿದರು. ಅಂಜುಮನ್ ಇಸ್ಲಾಂ ಕಮಿಟಿ ಚೇರಮನ್ ಹಸನಸಾಬ ತಟಗಾರ, ಎ.ಡಿ. ಕೋಲಕಾರ ಮಾತನಾಡಿದರು.

ಈ ವೇಳೆ ಮಾಜಿ ಪುರಸಭೆ ಸದಸ್ಯ ಮಾಸುಮಲಿ ಮಕಾನದಾರ, ಶ್ರೀಧರ ಬಿದರಳ್ಳಿ, ರಾಜು ಸಂಗ್ಲಿಕಾರ, ಮೈಬುಸಾಬ ಕೊಚಲಾಪೂರ, ದಾದೇಸಾಬ ಹಣಗಿ, ರಫೀ ಹವಾಲ್ದಾರ್, ಮಾಸುಮಲಿ ಮದಗಾರ, ಖ್ವಾಜಾ ಮಕಾನದಾರ, ನಿಶಾರಲಿ ಮಕಾನದಾರ ಮುಂತಾದವರು ಉಪಸ್ಥಿತರಿದ್ದರು.

### ಗದಗ ಉತ್ಸವ-2025ರ ಅಭಿನಂದನಾ ಸಮಾರಂಭದಲ್ಲಿ ಶ್ರೀ ಶಿವಶಾಂತವೀರ ಶರಣರು

# ಮಾಡುವ ಉದ್ಯೋಗದಲ್ಲಿ ನೆಮ್ಮದಿ ಕಾಣಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವ ಸಂಭ್ರಮವನ್ನು ಸಡಗರ ಸಂಭ್ರಮದಿಂದ ಆಚರಿಸಿಕೊಂಡಿದ್ದು, ಸಮಾರಂಭಕ್ಕೆ ಸಹಾಯ ಸಹಕಾರ ಮತ್ತು ಶ್ರಮಿಸಿದ ಎಲ್ಲ ಮಹನೀಯರಿಗೆ ಅಭಿನಂದನಾ ಸಮಾರಂಭವನ್ನು ಏರ್ಪಡಿಸುವ ಮುಖಾಂತರ ಅವರನ್ನು ಸ್ಮರಿಸುವ ಕಾರ್ಯವನ್ನು ಮಾಡುತ್ತಿರುವುದು ಸಂತೋಷವನ್ನುಂಟು ಮಾಡುತ್ತಿದೆ ಎಂದು ಚಿಕ್ಕೇನಕೊಪ್ಪದ ಶ್ರೀ ಚನ್ನವೀರ ಶರಣರಮಠದ ಪೂಜ್ಯ ಶ್ರೀ ಶಿವಶಾಂತವೀರ ಶರಣರು ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವ ಸಂಭ್ರದಮ ನಿಮಿತ್ತ ಹಮ್ಮಿಕೊಂಡಿದ್ದ ಗದಗ ಉತ್ಸವ-2025ರ ಅಭಿನಂದನಾ ಸಮಾರಂಭದ ದಿವ್ಯ ಸಾನ್ನಿಧ್ಯ



ವಹಿಸಿ ಶ್ರೀಗಳು ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಮಾತನಾಡಿ, ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವ ಕಾರ್ಯಕ್ರಮ ಯಶಸ್ವಿಯಾಗಲು ಸಹಾಯ-ಸಹಕಾರ ನೀಡಿದ ಎಲ್ಲರಿಗೂ ಅಭಿನಂದನೆ ಸಲ್ಲಿಸಿದರು.

ಸಂಸ್ಥೆಯ ಸದಸ್ಯರಾದ ರಮೇಶ ಶಿಗ್ಲಿ ಪ್ರಾರ್ಥಿಸಿದರು. ಪ್ರಾಸ್ತಾವಿಕವಾಗಿ ಸಂಸ್ಥೆಯ ಮಾಜಿ ಅಧ್ಯಕ್ಷ ಸಂಗಮೇಶ ದುಂದೂರ ಮಾತನಾಡಿದರು. ಸಮಾರಂಭದಲ್ಲಿ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವ ಸಂಭ್ರಮಕ್ಕೆ ಪ್ರಾಯೋಜಕತ್ವ ವಹಿಸಿದ ದಾನಿಗಳನ್ನು ಸನ್ಮಾನಿಸಲಾಯಿತು. ಉತ್ಸವ ಸಮಿತಿ ಚೇರಮನ್, ಕೋ-ಚೇರಮನ್ ಹಾಗೂ ವಿವಿಧ ಉಪ ಸಮಿತಿ ಸದಸ್ಯರಿಗೆ, ಸಂಸ್ಥೆಯ ಪದಾಧಿಕಾರಿಗಳಿಗೆ ಹಾಗೂ ಮಹಿಳಾ ಘಟಕದ ಪದಾಧಿಕಾರಿಗಳಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಸಂಸ್ಥೆಯ ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಎಸ್.ಕಾಲವಾಡ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಎಸ್. ಗುಡಿಮನಿ ವಂದಿಸಿದರು ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ತಿಳಿಸಿದ್ದಾರೆ.

> ನಮ್ಮ ದುಡಿಮೆಯ ಒಂದು ಭಾಗವನ್ನು ಸಮಾಜಕ್ಕೆ ಸಲ್ಲಿಸುವುದರ ಜೊತೆಗೆ ಅವಕಾಶ ಸಿಕ್ಕಾಗ ಒಳ್ಳೆಯ ಕೆಲಸ ಕಾರ್ಯಗಳಲ್ಲಿ ನಮ್ಮನ್ನು ನಾವು ತೊಡಗಿಸಿಕೊಳ್ಳುವುದು ನಮ್ಮ ಧರ್ಮವಾಗಿದೆ. ಪ್ರತಿಯೊಬ್ಬರೂ ತಾವು ಮಾಡುವ ಉದ್ಯೋಗದಲ್ಲಿ ತೃಪ್ತಿ, ನೆಮ್ಮದಿ, ಕಾಣಬೇಕು. ತನ್ನ ಉದ್ಯೋಗ ಬೆಳೆಯುವದರ ಜೊತೆಗೆ ಕೆಲಸ ಕಾರ್ಯಗಳಲ್ಲಿ ಸಹಾಯ ಮಾಡುವ ವ್ಯಕ್ತಿಗಳನ್ನು ಮಕ್ಕಳ ಹಾಗೆ ನೋಡಿಕೊಳ್ಳವುದರಿಂದ ವೃತ್ತಿಯ ಜೊತೆಗೆ ಉದ್ಯಮವೂ ಬೆಳೆಯುತ್ತದೆ ಎಂದು ಶ್ರೀ ಶಿವಶಾಂತವೀರ ಶರಣರು ಹೇಳಿದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

## ಸಂಪಾದಕೀಯ

# ಜನಸಂದಣಿ ನಿಯಂತ್ರಣ ವಿಧೇಯಕ: ಪರಿಶೀಲನೆಯ ಅಗತ್ಯ

ಇತ್ತೀಚೆಗೆ ವಿಧಾನಸಭೆಯಲ್ಲಿ ಮಂಡನೆಯಾದ 2025ನೇ ಸಾಲಿನ ಕರ್ನಾಟಕ ಜನಸಂದಣಿ ನಿಯಂತ್ರಣ ವಿಧೇಯಕವು ಅನೇಕ ಸದಸ್ಯರ ಆತಂಕ ಮತ್ತು ವಿರೋಧಕ್ಕೆ ಕಾರಣವಾಗಿದೆ.

ಇದರ ಪರಿಣಾಮವಾಗಿ, ವಿಧೇಯಕವನ್ನು ಸಮಗ್ರವಾಗಿ ಪರಿಶೀಲಿಸಿ ವರದಿ ನೀಡಲು ಪರಿಶೀಲನಾ ಸಮಿತಿಗೆ ವಹಿಸಿರುವುದು ಸ್ವಾಗತಾರ್ಹ ಬೆಳವಣಿಗೆ. ಇದು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ಒಂದು ಉತ್ತಮ ನಿರ್ಧಾರವಾಗಿದೆ.

ಈ ವಿಧೇಯಕದ ಮುಖ್ಯ ಉದ್ದೇಶ ಸಾರ್ವಜನಿಕ ಕಾರ್ಯಕ್ರಮಗಳು ಮತ್ತು ಗುಂಪುಗೂಡುವ ಸ್ಥಳಗಳಲ್ಲಿ ಜನಸಂದಣಿಯನ್ನು ನಿಯಂತ್ರಿಸುವುದಾಗಿದೆ. ಮೇಲ್ನೋಟಕ್ಕೆ ಇದು ಸಾರ್ವಜನಿಕ ಸುರಕ್ಷತೆ ಮತ್ತು ಸುವ್ಯವಸ್ಥೆಗಾಗಿ ಅಗತ್ಯವೆಂದು ಕಾಣಿಸಬಹುದು. ಆದರೆ, ವಿಧೇಯಕದ ಕೆಲವು ಅಂಶಗಳು ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯ, ಪ್ರತಿಭಟನಾ ಹಕ್ಕು ಹಾಗೂ ಧಾರ್ಮಿಕ ಮತ್ತು ಸಾಮಾಜಿಕ ಸಮಾರಂಭಗಳ ಮೇಲೆ ಪರಿಣಾಮ ಬೀರಬಹುದೆಂಬ ಕಳವಳ ವ್ಯಕ್ತವಾಗಿದೆ.

ಕಟ್ಟುನಿಟ್ಟಿನ ನಿಯಮಗಳು ಸಂಘ-ಸಂಸ್ಥೆಗಳು ಮತ್ತು ಸಾಮಾನ್ಯ ಜನರ ಹಕ್ಕುಗಳನ್ನು ಮೊಟಕುಗೊಳಿಸುವ ಸಾಧ್ಯತೆ ಇದೆ ಎಂದು ಹಲವರು ಅಭಿಪ್ರಾಯಪಟ್ಟಿದ್ದಾರೆ.

ಪರಿಶೀಲನಾ ಸಮಿತಿಯು ಈ ಎಲ್ಲ ಆತಂಕಗಳನ್ನು ಗಂಭೀರವಾಗಿ ಪರಿಗಣಿಸಬೇಕು. ವಿಧೇಯಕದ ಉದ್ದೇಶ ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡುವುದೇ ಹೊರತು, ಜನರ ಮೂಲಭೂತ ಹಕ್ಕುಗಳನ್ನು ಕಸಿದುಕೊಳ್ಳುವುದಲ್ಲ.

ಸಮಿತಿಯು ತಜ್ಞರು, ಸಾರ್ವಜನಿಕ ಪ್ರತಿನಿಧಿಗಳು ಹಾಗೂ ನಾಗರಿಕ ಸಮಾಜದ ಸದಸ್ಯರೊಂದಿಗೆ ಚರ್ಚಿಸಿ, ಎಲ್ಲರ ಹಿತಾಸಕ್ತಿಯನ್ನು ಸಮತೋಲನಗೊಳಿಸುವಂತಹ ವರದಿಯನ್ನು ಸಿದ್ಧಪಡಿಸಬೇಕು. ಈ ವಿಧೇಯಕವು ಸಮಾಜದ ಎಲ್ಲ ವರ್ಗಗಳಿಗೂ ನ್ಯಾಯಯುತವಾಗಿರುವಂತೆ ನೋಡಿಕೊಳ್ಳುವುದು ಅತ್ಯಂತ ಮುಖ್ಯ. ಹೀಗಾದಾಗ ಮಾತ್ರ ಈ ವಿಧೇಯಕವು ಕಾನೂನಾಗಿ ಜಾರಿಯಾದಾಗ ಸಾರ್ವಜನಿಕರ ಸಂಪೂರ್ಣ ಬೆಂಬಲ ಪಡೆಯಲು ಸಾಧ್ಯ.

### ಗದುಗಿನಲ್ಲಿ ಅತ್ಯಪರೂಪದ ರಕ್ತದ ಗುಂಪು 'ಬಾಂಬೆ ನೆಗೆಟಿವ್' ಪತ್ತೆ

# ರಕ್ತದಾನ ಶಿಬಿರಗಳ ಮಹತ್ವದ ಹೆಜ್ಜೆ




ಗದಗದಲ್ಲಿರುವ ಐಎಂಎ ರಕ್ತನಿಧಿಯಲ್ಲಿ ಅಪರೂಪದ ರಕ್ತದ ಗುಂಪು ಪತ್ತೆಯಾಗಿದೆ. ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ ಗದಗ ವೈದ್ಯರು ಅಪರೂಪದ ರಕ್ತದ ಗುಂಪನ್ನು ಪತ್ತೆಹಚ್ಚಿದರು. ಅದು ಬಾಂಬೆ ಆರ್‌ಎಚ್-ನೆಗೆಟಿವ್ ಎಂದು ತಿಳಿದಾಗ ಥಟ್ಟನೇ ವೈದ್ಯರಿಗೆ ತಿಳಿಸಿದರು. ಗದಗ ವೈದ್ಯರು ರಕ್ತವನ್ನು ಪರೀಕ್ಷಿಸಿದ ನಂತರ ಇದು ಅಪರೂಪದ ಫಿನೋಟೈಪ್ ಆಗಿದ್ದು, ಇದನ್ನು ಎಚ್‌ಎಚ್ ಗುಂಪು ಎಂದೂ ಕರೆಯುತ್ತಾರೆ ಮತ್ತು ಈ ಗುಂಪು ಬಾಂಬೆ ಆರ್‌ಎಚ್-ಪಾಸಿಟಿವ್‌ಗಿಂತಲೂ ಅಪರೂಪ ಎಂದು ಹೇಳಿದರು.

ಈ ಅಪರೂಪದ ರಕ್ತದ ಗುಂಪು ಸುಮಾರು 10ಸಾವಿರ ಜನರಲ್ಲಿ ಒಬ್ಬರಲ್ಲಿ ಕಂಡುಬರುತ್ತದೆ. ಈ ಅಪರೂಪದ ಪ್ರಕಾರ ಕಂಡುಬಂದಾಗ, ಗದಗ ವೈದ್ಯರು ಇದನ್ನು ಬೆಂಗಳೂರು ಮೂಲದ ಎನ್‌ಜಿಒ, ಅಪರೂಪದ ರಕ್ತ ಗುಂಪುಗಳಲ್ಲಿ ಪರಿಣತಿ ಹೊಂದಿರುವ ಸಂಕಲ್ಪ ಫೌಂಡೇಶನ್‌ನ ವೈದ್ಯರಿಗೆ ತಿಳಿಸಿದರು. ಈಗ ಗದಗ ಭಾರತೀಯ ವೈದ್ಯಕೀಯ ಸಂಘ (ಐಎಂಎ) ತಂಡದ ಸಹಾಯದಿಂದ ಸೂರತ್‌ಗೆ ಅಪರೂಪದ ರಕ್ತವನ್ನು ಕಳುಹಿಸಲಾಗಿದೆ. ರಕ್ತ ಘಟಕವನ್ನು ಕೋಲ್ಡ್ ಚೈನ್ ಬಾಕ್ಸ್‌ನಲ್ಲಿ ಪ್ಯಾಕ್ ಮಾಡಿ ಬೆಂಗಳೂರು ಮೂಲಕ ಸೂರತ್‌ಗೆ ಕಳುಹಿಸಲಾಗಿದೆ.

ಇತ್ತೀಚಿನ ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ ಈ ರಕ್ತ ಕಂಡುಬಂದಿದೆ. ಲ್ಯಾಬ್ ತಂತ್ರಜ್ಞರು ಮೊದಲು ಪರೀಕ್ಷಿಸಿದಾಗ ಅದು ಎ ಬಿ ಎಬಿ, ಒ ನೆಗೆಟಿವ್ ಅಥವಾ ಪಾಸಿಟಿವ್ ಅಲ್ಲ ಎಂದು ತಿಳಿದಾಗ ಆಶ್ಚರ್ಯಗೊಂಡರು. ನಂತರ ಅವರು ಡಾ. ರಾಜಶೇಖರ್ ಪವಾಡಶೆಟ್ಟರ್ ಮತ್ತು ಡಾ. ಶ್ರೀಧರ್ ಕುರಡಗಿ ಅವರಿಗೆ ಮಾಹಿತಿ ನೀಡಿದಾಗ ಅದು ಬಾಂಬೆ ನೆಗೆಟಿವ್ ಎಂದು ತಿಳಿದುಬಂದಿದೆ.

ಈ ರೀತಿಯ ಅಪರೂಪದ ರಕ್ತದ ಗುಂಪನ್ನು ಮುಂಬೈ (ಆಗ ಬಾಂಬೆ) ವೈದ್ಯ ಡಾ. ವೈ.ಎಂ. ಭೆಂಡೆ ಅವರು 1952ರಲ್ಲಿ ಕೆಇಎಂ ಆಸ್ಪತ್ರೆಯ ರಕ್ತ ನಿಧಿಯಲ್ಲಿ ಕಂಡುಹಿಡಿದರು. ಆ ಸಮಯದಲ್ಲಿ, ವಿವರವಾದ ಪರೀಕ್ಷೆಯನ್ನು ನಡೆಸಲಾಯಿತು ಮತ್ತು ಎ, ಬಿ ಅಥವಾ ಒ ಪ್ರತಿಜನಕಗಳ ನಿರ್ಮಾಣ ಘಟಕವಾದ ಎಚ್ ಪ್ರತಿಜನಕದ ಕೊರತೆ ಕಂಡುಬಂದಿತು. ನಂತರ ಅದನ್ನು ಬಾಂಬೆ ರಕ್ತ ಗುಂಪು ಎಂದು ಹೆಸರಿಸಲಾಯಿತು.

ಗದಗ ವೈದ್ಯರು ಇಂತಹ ಅಪರೂಪದ ರಕ್ತದ ಗುಂಪು ಕಂಡುಬಂದಿದ್ದಕ್ಕೆ ಸಂತಸ ವ್ಯಕ್ತಪಡಿಸಿದ್ದಾರೆ ಮತ್ತು ಈ ಸಾಧನೆಯು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರಗಳ ಮಹತ್ವವನ್ನು ಒತ್ತಿಹೇಳುತ್ತದೆ ಎಂದು ವೈದ್ಯ ಡಾ. ಶ್ರೀಧರ್ ಕುರಡಗಿ ಹೇಳಿದರು.

ರಕ್ತನಿಧಿ ಕಚೇರಿಯ ಡಾ. ರಾಜಶೇಖರ್ ಪವಾಡಶೆಟ್ಟರ್ ಅವರು, ಗದಗದಲ್ಲಿ ಅಪರೂಪದ ರಕ್ತದ ಗುಂಪನ್ನು ಪಡೆಯಲು ನಮಗೆ ಸಂತೋಷವಾಗಿದೆ. ಇದು ಗದಗದಲ್ಲಿ ಇತ್ತೀಚೆಗೆ ನಡೆದ ಸ್ವಯಂಪ್ರೇರಿತ ರಕ್ತದಾನ ಶಿಬಿರಗಳಲ್ಲಿ ಕಂಡುಬಂದಿದೆ. ಪ್ರಾದೇಶಿಕ ರಕ್ತ ನಿಧಿಗಳು ತಮ್ಮ ಜಿಲ್ಲೆಗಳು ಮತ್ತು ರಾಜ್ಯಗಳನ್ನು ಮೀರಿ ಜೀವಗಳನ್ನು ಉಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಮತ್ತು ಈಗ ನಮಗೆ ಅಂತಹ ಒಂದು ಉದಾಹರಣೆ ಸಿಕ್ಕಿದೆ' ಎಂದರು.

ರಕ್ತ ಬ್ಯಾಂಕ್ ಅಧಿಕಾರಿ ಡಾ. ರಾಜಶೇಖರ್ ಪವಾಡಶೆಟ್ಟರ್, ಅಧ್ಯಕ್ಷ ಡಾ. ಶ್ರೀಧರ್ ಕುರಡಗಿ, ಕಾರ್ಯದರ್ಶಿ ಡಾ. ಅವಿನಾಶ್ ಓದುಗೌಡರ್, ವ್ಯವಸ್ಥಾಪಕರಾದ ಅನಿಲ್ ಮತ್ತು ತಂಡವು ಈ ಉದಾತ್ತ ಕಾರ್ಯವನ್ನು ಸಾಧಿಸಿ ಜೀವ ಉಳಿಸುವ ಕಾರ್ಯಕ್ಕೆ ಕೊಡುಗೆ ನೀಡಿದೆ ಎಂದು ಡಾ. ಪ್ಯಾರಾಲಿ ನೂರಾನಿ ಅಭಿಪ್ರಾಯಪಟ್ಟಿದ್ದಾರೆ.

**– ರಘೋತ್ತಮ ಕೊಪ್ಪರ್. ಪತ್ರಕರ್ತರು.**



ಗದಗ: ನವರಾತ್ರಿ ಸಂಭ್ರಮದ ನಿಮಿತ್ತ ಎರಡನೇ ದಿನವಾದ ಮಂಗಳವಾರದಂದು ಮುಳಗುಂದ ರಸ್ತೆಯ ಗಂಗಾನಗರದ ನಿವಾಸಿಗಳು ಕೆಂಪು ವರ್ಣದ ಸೀರೆಯನ್ನುಟ್ಟು ಸಂಭ್ರಮಿಸಿದ ಕ್ಷಣ.



ಗದಗ: ನವರಾತ್ರಿ 2ನೇ ದಿನದ ಬ್ರಹ್ಮಚಾರಿಣಿಯ ಆರಾಧನೆ ಹಿನ್ನೆಲೆಯಲ್ಲಿ ದುರ್ಗಾಮಾತೆಯ ಬ್ರಹ್ಮಚಾರಿಣಿ ಅವತಾರಕ್ಕೆ ಪೂಜೆ ನಿಮಿತ್ತ ಗದಗ ನಗರದ ಪ್ರತಿಷ್ಠಿತ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರ ಉಪನ್ಯಾಸಕಿಯರು ಕೆಂಪು ಸೀರೆ ಧರಿಸಿರುವ ವಿಶೇಷ ಕ್ಷಣ.

# ದೈವೀ ಸ್ಮರಣೆಯಿಂದ ಮನಃಶಾಂತಿ ಪ್ರಾಪ್ತಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಬೆಳಕಿನ ಕಿರಣಗಳು ಕತ್ತಲನ್ನು ಹೊಗಲಾಡಿಸಿದಂತೆ ಅಜ್ಞಾನ, ಅಂಧಕಾರವನ್ನು ಹೊಡೆದೋಡಿಸುವ, ದೇವಾನುದೇವತೆಗಳ ಆರಾಧನೆಯ ದಿನಗಳನ್ನು ನವರಾತ್ರಿ ಎಂದು ಕರೆಯುತ್ತೇವೆ ಎಂದು ನಿಡಗುಂದಿಕೊಪ್ಪ ಶಾಖಾ ಶಿವಯೋಗಮಂದಿರ ಮಠದ ಶ್ರೀ ಅಭಿನವ ಚನ್ನಬಸವ ಸ್ವಾಮಿಗಳು ಹೇಳಿದರು.

ಸಮೀಪದ ಕೋಚಲಾಪುರ ಗ್ರಾಮದ ಶ್ರೀ ಬನಶಂಕರಿದೇವಿ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಪ್ರಾರಂಭವಾದ ಪುರಾಣ ಉದ್ಘಾಟನೆಯನ್ನು ನೆರವೇರಿಸಿ ಅವರು ಆಶೀರ್ವಚನ ನೀಡಿದರು.

ಈ ನಾಡಿನ ವಿಶಿಷ್ಟ ಪರಂಪರೆಯಲ್ಲಿ ವಿವಿಧ ಧರ್ಮೀಯರು ವಿವಿಧ ಹಬ್ಬ ಹರಿದಿನಗಳನ್ನು ಆಚರಿಸುತ್ತಿದ್ದು, ಅವುಗಳೆಲ್ಲವೂ ಸಕಲ ಜೀವಾತ್ಮಗಳ ಪೂರಕವಾಗಿವೆ. ದೇವಿ ದುಷ್ಟರನ್ನು ಸಂಹರಿಸಿ ಶಿಷ್ಟರನ್ನು ಪರಿಪಾಲಿಸುವ ಶಕ್ತಿದಾತೆಯಾಗಿದ್ದಾಳೆ. ಅವಳ ಆರಾಧನೆಯಿಂದ ದುರ್ಗುಣಗಳನ್ನು ತ್ಯಜಿಸಿ ಸದ್ಗುಣಗಳನ್ನು ಅಳವಡಿಸುವುದು ಈ ಹಬ್ಬದ ವಿಶೇಷತೆಯಾದರೆ, ಮುಂದಿನ ದೀಪಾವಳಿಯಲ್ಲಿ ಲಕ್ಷ್ಮೀ ಮತ್ತು ಸರಸ್ವತಿಯರನ್ನು ಪೂಜಿಸಿ ಧನ ಸಂಪತ್ತು ಹಾಗೂ ಮಕ್ಕಳಿಗೆ ವಿದ್ಯೆಯನ್ನು ಕಲ್ಪಿಸುವ ದೈವೀ ಸಂಕಲ್ಪವಾಗಿದೆ. ಈ ಎಲ್ಲ ದೇವತೆಗಳ ಸ್ಮರಣೆ ಮೂಲಕ ಪ್ರತಿಯೊಬ್ಬರಲ್ಲಿ ಮನಃಶಾಂತಿ ಪ್ರಾಪ್ತಿಯಾಗುತ್ತದೆ ಎಂದು ಹೇಳಿದರು.

ಡಾ. ಆರ್.ಕೆ. ಗಚ್ಚಿನಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ರೋಣ ಬೂದೀಶ್ವರ ಮಠದ ಡಾ. ವಿಶ್ವನಾಥ ಸ್ವಾಮಿಗಳು ಮೊದಲ ದಿನದ ದೇವಿ ಪುರಾಣದ ಅಧ್ಯಾಯವನ್ನು ಪಠಣ ಮಾಡಿದರು. ಗೂಳಯ್ಯ ಮಾಲಗಿತ್ತಿಮಠ, ಶಿವುನಗೌಡ ಅಯ್ಯನಗೌಡ್ರ ಮುಂತಾದವರು ಉಪಸ್ಥಿತರಿದ್ದರು. ಅಂದಾನಯ್ಯ ಹಾಲಕೆರಿಮಠ ನಿರ್ವಹಿಸಿದರು.

# ಬನ್ನಿ ವೃಕ್ಷಕ್ಕೆ ವಿಶೇಷ ಪೂಜೆ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನವರಾತ್ರಿ ಹಬ್ಬ ಬಂತೆಂದರೆ ಮಹಿಳೆಯರಿಗೆ ಎಲ್ಲಿಲ್ಲದ ಸಡಗರ, ಸಂಭ್ರಮ. ಹಬ್ಬದ ಅಂಗವಾಗಿ ನರೇಗಲ್ಲ ಹಾಗೂ ಸುತ್ತಮುತ್ತಲಿನ ವಿವಿಧ ಗ್ರಾಮಗಳ ಮಹಿಳೆಯರು, ಯುವತಿಯರು, ಮಕ್ಕಳು ಬನ್ನಿ ವೃಕ್ಷಕ್ಕೆ ಬ್ರಾಹ್ಮಿ ಮಹೂರ್ತದಲ್ಲಿ ಮೌನವೃತಾಚರಣೆಯ ಮೂಲಕ ವಿಶೇಷ ಪೂಜೆ ಸಲ್ಲಿಸುತ್ತಾರೆ.

ಈ ವರ್ಷವೂ ನರೇಗಲ್ಲ ಹೋಬಳಿಯಾದ್ಯಂತ ಅಲ್ಲಲ್ಲಿ ನೂರಾರು ಸಂಖ್ಯೆಯಲ್ಲಿ ಮಹಿಳೆಯರು, ಯುವತಿಯರು, ಮಕ್ಕಳು ಸೇರಿದಂತೆ ವಿವಿಧ ಗ್ರಾಮಗಳಲ್ಲಿರುವ ಬನ್ನಿ ಮಹಾಂಕಾಳಿ ವೃಕ್ಷಕ್ಕೆ ಭಕ್ತಿಪೂರ್ವಕವಾಗಿ ವಿಶೇಷ ಪೂಜೆಯನ್ನು ಸಲ್ಲಿಸುವ ಮೂಲಕ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಸೂರ್ಯೋದಯಕ್ಕೂ ಮುಂಚಿತವಾಗಿ ಮೌನವಾಗಿ ಬನ್ನಿ ಮರಕ್ಕೆ ವಿಶೇಷ ಪೂಜೆ ಸಲ್ಲಿಸುವುದು ಕಂಡುಬಂದಿತು. ಮಕ್ಕಳು ವಿದ್ಯೆ ಕರುಣಿಸಲೆಂದು, ಗೃಹಿಣಿಯರು ತಮ್ಮ ಸಂಸಾರ ಚೆನ್ನಾಗಿರಲಿ ಎಂದು ಹಾಗೂ ಯುವತಿಯರು ಕಂಕಣಭಾಗ್ಯ ದೊರೆತು ಉತ್ತಮ ಜೀವನ ಸಿಗಲಿ ಎಂದು ಬೇಡಿಕೊಂಡು ಪ್ರಾರ್ಥಿಸಿದರು.

ಬ್ರಾಹ್ಮಿ ಮಹೂರ್ತದಲ್ಲಿ ಮೌನವೃತ ಆಚರಿಸಿ ಶಮಿ ವೃಕ್ಷಕ್ಕೆ ಪೂಜೆ ಸಲ್ಲಿಸುವುದರಿಂದ ನಮ್ಮ ಕಷ್ಟಗಳು ಬಹು ಬೇಗ ನಿವಾರಣೆಯಾಗುತ್ತವೆ ಎಂಬ ಬಲವಾದ ನಂಬಿಕೆ ಇಲ್ಲಿನ ಮಹಿಳೆಯರದ್ದಾಗಿದೆ. ಈ ವೃತಾಚರಣೆಯಿಂದ ಗ್ರಾಮದ ಹಲವಾರು ಕುಟುಂಬದವರಿಗೆ ಸುಖ, ಶಾಂತಿ, ನೆಮ್ಮದಿಯ ಜೀವನ ಪ್ರಾಪ್ತಿಯಾಗಿದೆ ಎಂದು ಹೊಸಪೇಟಿ ಓಣಿಯ ನಿವಾಸಿರೇಖಾ ಪಾಯಪ್ಪಗೌಡ್ರ ಅಭಿಪ್ರಾಯಪಟ್ಟರು.

# ಪ್ರತಿಯೊಬ್ಬರೂ ದೇವಿ ಪುರಾಣ ಆಲಿಸಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**


ದೇವಿ ಪುರಾಣ ಆಲಿಸುವುದರಿಂದ ದುಷ್ಟಶಕ್ತಿಗಳನ್ನು ನಿಗ್ರಹಿಸಲು ಸಹಕಾರಿ ಎಂದು ಪರ್ವಾತಿ ಕಳ್ಳಿಮಠ ಹೇಳಿದರು.

ಅವರು ಪಟ್ಟಣದ ರೇಣುಕಾ ಯಲ್ಲಮ್ಮಾ ದೇವಸ್ಥಾನದಲ್ಲಿ ಶರನ್ನವರಾತ್ರಿ ಉತ್ಸವದ ಅಂಗವಾಗಿ ಜರುಗಿದ ದೇವಿ ಪುರಾಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನಮ್ಮಲ್ಲಿರುವ ದುಷ್ಟಶಕ್ತಿಗಳನ್ನು ನಿಗ್ರಹಿಸಲು ದೇವಿ ಪುರಾಣ ಸ ಹ ಕಾ ರಿ ಂ ು ಾ ಗಿ ದ್ ು, ಪ್ರತಿಯೊಬ್ಬರೂ ದೇವಿ ಪುರಾಣ ಆಲಿಸಬೇಕು ಎಂದರು.

ಕೆ.ಎಂ. ಕಳ್ಳಿಮಠ, ಅಶೋಕ ಸೋನಗೋಜಿ, ಹರ್ಷಲತಾ ದೇಶಪಾಂಡೆ, ಶಾಂತಾ, ಚಂದ್ರಶೇಖರ ಹುಣಶಿಕಟ್ಟಿ, ಮಂಜುನಾಥ ಮಟ್ಟಿ, ದಶರಥ ಕೋಟೆಗೌಡರ, ನಿರ್ಮಲಾ ಅರಮನಿ, ಅಕ್ಕಮ್ಮಾ ನೀಲಗುಂದ, ಶೋಭಾ ಪಾಟೀಲ, ವೈಜಯಂತಿಮಾಲಾ ವಂಟಕರ, ನಾಗವೇಣಿ ನಾಯರ್, ಪ್ರಕಾಶ ಮದ್ದಿನ ಇದ್ದರು.

# ಪುರಾಣದಲ್ಲಿ ಗಮನ ಸೆಳೆದ ಬಿತ್ತುವ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಸಮೀಪದ ಜಕ್ಕಲಿ ಗ್ರಾಮದ ಹಾಲಕೆರೆ ಶ್ರೀ ಅನ್ನದಾನೇಶ್ವರ ಶಾಖಾ ಶ್ರೀಮಠದಲ್ಲಿ ನಡೆಯುತ್ತಿರುವ ನಾಲವತವಾಡ ಶ್ರೀ ವೀರೇಶ್ವರ ಶರಣರ ಪುರಾಣದಲ್ಲಿ ಬರುವ ಹೊಲ ಬಿತ್ತುವ ಸನ್ನಿವೇಶವನ್ನು ಭಕ್ತರು ಸಾಕಾರಗೊಳಿಸಿದರು.

ಸ್ಥಳೀಯ ಶ್ರೀ ಬಸವೇಶ್ವರ ಭಜನಾ ಮೇಳದವರು ಎತ್ತುಗಳನ್ನು ವಿಶೇಷ ಅಲಂಕಾರದೊಂದಿಗೆ ಹೂಡಿಕೊಂಡು ಪೂಜೆ ನೆರವೇರಿಸಿ ಗ್ರಾಮದ ಪ್ರಮುಖ ಬೀದಿಗಳ ಮೂಲಕ ವೈಭವದ ಮೆರವಣಿಗೆಯೊಂದಿಗೆ ಶ್ರೀಗಳವರ ಮಠವನ್ನು ತಲುಪಿದರು. ಬಳಿಕ ಶ್ರೀಮಠದಲ್ಲಿ ಬಿತ್ತುವ ಈ ಸನ್ನಿವೇಶವನ್ನು ನೈಜವಾಗಿ ಆಚರಿಸುವ ಮೂಲಕ ರೈತ ಸಮೂಹ ಗಮನ ಸೆಳೆದರು.

ಹಿಂದಿನ ರಾತ್ರಿ ಕೃಷಿ ಕೆಲಸಕ್ಕೆ ಬಳಸುವ ಸಲಕರಣೆಗಳಾದ ಕೂರಿಗೆಯನ್ನು ವೀರಪ್ಪ ಯಾವಗಲ್ಲ, ಬೆಳಸಲ ಕುಂಟೆಯನ್ನು ಮುತ್ತಪ್ಪ ಕೋರಿ ಹರಾಜು ಮಾಡುವ ವೇಳೆ ತೆಗೆದುಕೊಂಡಿದ್ದರು. ಮಾರನೇ ದಿನ ಮಹಾಂತೇಶ ಮೆಣಸಗಿ ಇವರ ಎತ್ತುಗಳೊಂದಿಗೆ ವೀರಪ್ಪ ಯಾವಗಲ್ಲ ಬಿತ್ತನೆ ಮಾಡಿದರು. ಶಕುಂತಲಾ ಯಾವಗಲ್ಲ ಅಕ್ಕಡಿ ಹಾಕಿದರು. ಮುತ್ತಪ್ಪ ಕೋರಿ ಬೆಳೆಸಲ್ಲ ಹೊಡೆದು ಧನ್ಯತೆ ಮೆರೆದರು. ಈ ಸಂದರ್ಭದಲ್ಲಿ ಎಂ.ಜಿ. ಗುರುಸಿದ್ದೇಶ್ವರ ಶಾಸ್ತ್ರಿಗಳು, ರೈತರಾದ ಶರಣಯ್ಯ ಹಿರೇಮಠ, ಶೇಖಣ್ಣ ಮೇಟಿ, ವೀರಣ್ಣ ಸಂಗಳದ, ಮಲ್ಲಣ್ಣ ಮೇಟಿ, ಗಣೇಶ ಯಾವಗಲ್ಲ, ಸುನೀಲ ಸಂಕನೂರ, ಶೇಖರ ಯಾವಗಲ್ಲ, ಕುಮಾರ ನರೇಗಲ್ಲ, ಮುತ್ತಪ್ಪ ಶ್ಯಾಶೆಟ್ಟಿ, ನಿಡಗುಂದಿಯ ಪರಸಪ್ಪ ತಳವಾರ, ಜಿಗಳೂರಿನ ಬಸವರಾಜ ಹಾಳಕೆರೆ, ತೆ-ೞಟಗಂಟಿಯ ಅಣ್ಣಪ್ಪ ಕುರಡಗಿ, ನರೇಗಲ್ಲದ ಮಲ್ಲಪ್ಪ ಮಾವಿನಕಾಯಿ, ಕೋಟುಮಚಗಿಯ ಮುತ್ತಣ್ಣ ನೇಗಲಿ ಮುಂತಾದವರಿದ್ದರು.

# ಇಂದು ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

110 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವದರಿಂದ ಸೆ.24ರ ಮುಂಜಾನೆ 11 ಗಂಟೆಯಿಂದ ಸಂಜೆ 5.30ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕುಡಿಯುವ ನೀರಿನ ಸ್ಥಾವರಗಳು, ಕೈಗಾರಿಕಾ, ಸೋಲಾರ್, ಐಪಿಪಿ, ಮೆ: ಬಿಪಿಸಿಎಲ್ 1 ಮತ್ತು 2ರ ಗಾಳಿಯಂತ್ರ ಘಟಕ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಹೆಸ್ಕಾಂ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

# ಸೆ.26ರಂದು ಸಾರಿಗೆ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ದಿ:26–9–2025 ರಂದು ಸಂಜೆ 4 ಗಂಟೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಕೊಠಡಿಯಲ್ಲಿ ಸಾರಿಗೆ ಅದಾಲತ್ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ಸಾರ್ವಜನಿಕರು, ವಾಹನಗಳ ಮಾಲೀಕರು ಮತ್ತು ಚಾಲಕರು ಕಚೇರಿಗೆ ಸಂಬಂಧಿಸಿದಂತೆ ಕುಂದುಕೊರತೆಗಳಿದ್ದಲ್ಲಿ ಅಂದು ಕಚೇರಿಗೆ ಆಗಮಿಸಿ ತಮ್ಮ ಸಮಸ್ಯೆಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಮೂರ್ತಿ ಎಚ್.ಶಶಿಧರ್ ಶೆಟ್ಟಿ ಮಾಹಿತಿ

# ಅರೆಕಾಲಿಕ ಸ್ವಯಂ ಸೇವಕರುಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯಾದ್ಯಂತ ಎಲ್ಲ ಜಿಲ್ಲೆ ಹಾಗೂ ತಾಲೂಕುಗಳಲ್ಲಿನ ಕಾನೂನು ಸೇವಾ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸಲು ಅರೆಕಾಲಿಕ ಸ್ವಯಂ ಸೇವಕರುಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಗೆ ಅಕ್ಟೋಬರ್ 20 ಕೊನೆಯ ದಿನವಾಗಿದೆ ಎಂದು ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಮೂರ್ತಿ ಎಚ್.ಶಶಿಧರ್ ಶೆಟ್ಟಿ ಹೇಳಿದರು.

ಅವರು ಮಂಗಳವಾರ ಬೆಂಗಳೂರಿನಿಂದ ಎಲ್ಲ ಜಿಲ್ಲಾ ಕೇಂದ್ರಗಳ ಕಾನೂನು ಸೇವಾ ಪ್ರಾದಿಕಾರದ ಮೂಲಕ ಪತ್ರಕರ್ತರೊಂದಿಗೆ ವಿಡಿಯೋ ಕಾನ್ಫರನ್ಸ್‌ನಲ್ಲಿ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.



ಸ್ವಪ್ರೇರಿತ ಕಾನೂನು ಸಹಾಯಕರು ಯಾವುದೇ ಶುಲ್ಕ, ಸಂಭಾವನೆ ಅಥವಾ ಸಂಬಳವನ್ನು ನಿರೀಕ್ಷಿಸದೆ ತಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿರುವ ಶೋಷಿತ ಹಾಗೂ ತುಳಿತಕ್ಕೊಳಗಾದ ಜನರ ಸೇವೆಗಳನ್ನು ಮಾಡಲು ಅರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಲು ಇಚ್ಛಿಸುವ ಕಾನೂನು ವಿದ್ಯಾರ್ಥಿಗಳು, ವೈದ್ಯಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳು, ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು, ಎಮ್.ಎಸ್. ಡಬ್ಲೂ ವಿದ್ಯಾರ್ಥಿಗಳು ಮತ್ತು ಶಿಕ್ಷಕರು, ಕಾನೂನು ವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ನಿವೃತ್ತ ಸರ್ಕಾರಿ ನೌಕರರು, ಮಾಜಿ ಸೈನಿಕರು ಹಾಗೂ ಅವರ ಕುಟುಂಬದ ಸದಸ್ಯರು, ವಿವಿಧ ಸಂಘಟನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ಸೇವಾ ಮನೋಭಾವ ಹೊಂದಿರುವ ಪುರುಷ ಮತ್ತು ಮಹಿಳೆಯರು, ಮಂಗಳಮುಖಿಯರು, ಸನ್ನಡತೆ ಹೊಂದಿದ ಕಾರಾಗೃಹ ಬಂದಿಗಳು ಮತ್ತು ಸ್ವ-ಸಹಾಯ ಸಂಘಗಳ ಸದಸ್ಯರು, ಸಾಮಾಜಿಕ ಕಾರ್ಯಕರ್ತರು, ಪತ್ರಕರ್ತರು ಸೇವೆ ಸಲ್ಲಿಸಲು ಆಸಕ್ತಿ ಇರುವವರು ಅರ್ಜಿ ಸಲ್ಲಿಸಬಹುದು.

ಗದಗ ತಾಲೂಕಿನಲ್ಲಿ ಸೇವೆ ಸಲ್ಲಿಸಲು ಆಸಕ್ತರಿರುವ ಅಭ್ಯರ್ಥಿಗಳು ಗದಗ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ ಕಚೇರಿಗೆ ಹಾಗೂ ಆಯಾ ತಾಲೂಕಿನ ಅಭ್ಯರ್ಥಿಗಳು ಮೇಲ್ಕಂಡ ತಾಲೂಕಿನ ನ್ಯಾಯಾಲಯದ ಆವರಣದಲ್ಲಿರುವ ತಾಲೂಕಾ ಕಾನೂನು ಸೇವಾ ಸಮಿತಿಗಳಲ್ಲಿರುವ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ಅವಧಿಯೊಳಗೆ ಖುದ್ದಾಗಿ ಸಲ್ಲಿಸಬೇಕು. ಸಂದರ್ಶನದ ದಿನಾಂಕ ಹಾಗೂ ಸಮಯವನ್ನು ನಂತರ ತಿಳಿಸಲಾಗುವುದು ಎಂದರು.

ಆಯ್ಕೆಯಾದ ಅಭ್ಯರ್ಥಿಗಳಿಗೆ ಕಾನೂನು ಸೇವಾ ಪ್ರಾಧಿಕಾರದಿಂದ ಐಡಿ ಗುರುತಿನ ಚೀಟಿ ನೀಡುವುದರೊಂದಿಗೆ ಒಂದು ವರ್ಷದವರೆಗೆ ನೇಮಕ ಮಾಡಿಕೊಳ್ಳಲಾಗುವುದು. ಅವರು ತಮ್ಮ ವ್ಯಾಪ್ತಿಯಲ್ಲಿ ಇರುವ ವಿವಿಧ ರೀತಿಯ ಪ್ರಕರಣ ಸೇರಿದಂತೆ ಕಾನೂನು ಸೇವಾ ಪ್ರಾಧಿಕಾರ ವಹಿಸುವ ಕಾರ್ಯವನ್ನು ನಿರ್ವಹಿಸಬೇಕು. ಅವರ ಕಾರ್ಯ ತೃಪ್ತಿಕರವಾಗಿದ್ದಲ್ಲಿ ಮುಂದುವರೆಸಲಾಗುವುದು ಎಂದು ನ್ಯಾಯಮೂರ್ತಿ ಎಚ್.ಶಶಿಧರ್ ಶೆಟ್ಟಿ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ಸ್ವಯಂ ಸೇವಕರ ಹುದ್ದೆಗಾಗಿ ವಿವಿಧ ಕ್ಷೇತ್ರಗಳ ಆಸಕ್ತ ಅಭ್ಯರ್ಥಿಗಳು ನಿಗದಿತ ಸಮಯದೊಳಗೆ ಅರ್ಜಿ ಸಲ್ಲಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ವಹಿಸಿದ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸುವ ಮೂಲಕ ಜನಸಾಮಾನ್ಯರಿಗೆ ನೆರವಾಗಬೇಕು ಎಂದರು.

# ಕ್ರೀಡೆಗಳಿಂದ ಶಾರೀರಿಕ, ಮಾನಸಿಕ ಆರೋಗ್ಯ ವೃದ್ಧಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಾಧನೆ ಸಾಧಕನ ಸ್ವತ್ತೇ ಹೊರತು ಸೋಮಾರಿಯ ಸೊತ್ತಲ್ಲ. ಪ್ರತಿಯೊಬ್ಬರೂ ತಮ್ಮಲ್ಲಿನ ಸಾಮರ್ಥ್ಯಗಳನ್ನು ಸದ್ಬಳಕೆ ಮಾಡಿಕೊಂಡು ಯಶಸ್ಸಿನ ಹಾದಿಯಲ್ಲಿ ಮುನ್ನುಗ್ಗಬೇಕು ಎಂದು ಹೊಸಳ್ಳಿ ಅಭಿನವ ಬೂದೀಶ್ವರ ಮಾಹಾಸ್ವಾಮೀಜಿ ಹೇಳಿದರು.

ಅವರು ಸಮಿಪದ ಹೊಸಳ್ಳಿ ಜಗದ್ಗುರು ಬೂದೀಶ್ವರ ವಿದ್ಯಾಪೀಠದ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ಗದಗ ತಾಲೂಕು ಮಟ್ಟದ 'ಬಿ' ವಲಯದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು. ಕ್ರೀಡಾಕೂಟದಲ್ಲಿ ಭಾಗವಹಿಸುವುದರಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗುತ್ತೇವೆ. ಜಗತ್ತಿನಲ್ಲಿ ಎಲ್ಲವನ್ನೂ ಸಾಧಿಸಬಲ್ಲ ಶಕ್ತಿ ಪ್ರತಿಯೊಬ್ಬರಲ್ಲೂ ಇರುತ್ತದೆ. ಅದನ್ನು ಗುರುತಿಸಿಕೊಂಡು ಸಾಧಿಸುವತ್ತ ಸತತ ಪ್ರಯತ್ನ ಮಾಡಿದರೆ ಸಾಧನೆ ಸಾಧ್ಯವಾಗುತ್ತದೆ. ಕ್ರೀಡೆಗಳು ಮಕ್ಕಳ ವ್ಯಕ್ತಿತ್ವ, ಶಾರೀರಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಸಹಕಾರಿ ಎಂದರು.

ಪ.ಪೂ ಕಾಲೇಜು ಉಪನಿರ್ದೇಶಕ ಬಂಡು ಮಸನಾಯಕ, ಅಪ್ಪಣ್ಣಾ ಇನಾಮತಿ, ಸಿ.ಬಿ. ಕರಕಟ್ಟಿ, ಶಿವಾನಂದ ದೂಳಪ್ಪನವರ, ಶಿವಕುಮಾರ ಶೇಟ್ಟರ, ಬಸವರಾಜ ಗುಜಮಾಗಡಿ, ಮಂಜುನಾಥ ಅಂಗಡಿ, ಪ್ರಭು ಅಂಗಡಿ, ಅನುರಾಧಾ ರಕ್ಕಸಗಿ, ಟಿ.ವಿ. ರೋಣದ, ಎ.ಎಂ. ಅಂಗಡಿ ಇದ್ದರು.

# ಪೌರ ಕಾರ್ಮಿಕರು ಕಾಯಕ ಯೋಗಿಗಳು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸೌಂದರ್ಯ ಹಾಗೂ ಸ್ವಚ್ಛತೆ ಕಾಪಾಡುವಲ್ಲಿ ಪೌರ ಕಾರ್ಮಿಕರ ಕೆಲಸ ಮಹತ್ವದ್ದಾಗಿದೆ. ಪೌರ ಕಾರ್ಮಿಕರು ಕಾಯಕ ಯೋಗಿಗಳು ಎಂದು ಪ.ಪಂ ಸದಸ್ಯ ಕೆ.ಎಲ್. ಕರಿಗೌಡರ ಹೇಳಿದರು.

ಅವರು ಪಟ್ಟಣ ಪಂಚಾಯಿತಿ ಸಭಾ ಭವನದಲ್ಲಿ 14ನೇ ಪೌರ ಕಾರ್ಮಿಕರ ದಿನಾಚರಣೆಯಲ್ಲಿ ಪೌರ ಕಾರ್ಮಿಕರನ್ನು ಗೌರವಿಸಿ ಮಾತನಾಡಿದರು.

ಮುಳಗುಂದ ಪಟ್ಟಣಕ್ಕೆ ಸತತ ಮೂರು ಬಾರಿ ಪ್ರಶಸ್ತಿ ದೊರೆಯಲು ಪೌರ ಕಾರ್ಮಿಕರ ಶ್ರಮ ಕಾರಣವಾಗಿದೆ. ಇವರು ನಿತ್ಯ ಕಾಯಕ ಯೋಗಿಗಳು. ಅವರುಗಳನ್ನು ಗೌರವದಿಂದ ಕಾಣಬೇಕು, ಕೇವಲ ಪೌರ ಕಾರ್ಮಿಕರು ಮಾತ್ರ ಸ್ವಚ್ಛತೆಗೆ ಪಣತೊಟ್ಟರೆ ಸಾಲದು. ಪ್ರತಿಯೊಬ್ಬ ನಾಗರಿಕರು ಸ್ವಚ್ಛತೆ ಬಗ್ಗೆ ಜಾಗೃತಿ ವಹಿಸಿದಲ್ಲಿ ನಮ್ಮೆಲ್ಲರ ಆರೋಗ್ಯ ಕಾಪಾಡುವುದರ ಜತೆಯಲ್ಲಿ ಸುಂದರ ಪರಿಸರ ನಿರ್ಮಿಸಲು ಸಾಧ್ಯ ಎಂದರು.



ಎಂ.ಎನ್. ನಡಗೇರಿ ಮಾತನಾಡಿ, ಪೌರ ಕಾರ್ಮಿಕರ ಸೇವೆಯಿಂದ ಇಂದು ನಾವೆಲ್ಲರೂ ಆರೋಗ್ಯದಿಂದ ನೆಮ್ಮದಿಯ ಬದುಕು ಸಾಗಿಸಲು ಸಾಧ್ಯವಾಗಿದೆ. ಪೌರ ಕಾರ್ಮಿರಕರಿಗೂ ಸಾಕಷ್ಟು ಸಮಸ್ಯೆಗಳು ಇರುವುದರಿಂದ ಅವುಗಳನ್ನು ನಾವೆಲ್ಲರೂ ಬಗೆಹರಿಸುವ ಮೂಲಕ ನೆಮ್ಮದಿ ಜೀವನ ನಡೆಸುವಂತೆ ಅವರ ಜೊತೆ ನಿಲ್ಲೋಣ ಎಂದರು.

ಅಧ್ಯಕ್ಷತೆಯನ್ನು ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ ವಹಿಸಿದ್ದರು. ಉಪಾಧ್ಯಕ್ಷೆ ಅನಸೂಯಾ ಸೋಮಗೇರಿ, ಪ.ಪಂ ಮುಖ್ಯಾಧಿಕಾರಿ ಕೃಷ್ಣಾ ಹಾದಿಮನಿ, ವಾಣಿಶ್ರೀ ನಿರಂಜನ, ಮಾಹಾದೇವಪ್ಪ ಗಡಾದ, ಮಾಹಾಂತೇಶ ನೀಲಗುಂದ, ನಾಗರಾಜ ದೇಶಪಾಂಡೆ, ಪೌರ ಕಾರ್ಮಿಕ ಸಂಘದ ಅಧ್ಯಕ್ಷ ನೀಲಪ್ಪ ದೊಡ್ಡಮನಿ, ಉಪಾಧ್ಯಕ್ಷ ಮಾಹಾಂತಪ್ಪ ದಿವಟರ, ಪ.ಪಂ ಸರ್ವ ಸದಸ್ಯರು ಹಾಗೂ ಪೌರ ಕಾರ್ಮಿಕರು ಇದ್ದರು.

# ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ತಾಲೂಕಿನ ಹೊಸಳ್ಳಿ ಗ್ರಾಮದಲ್ಲಿ ನಡೆದ ಪದವಿ ಪೂರ್ವ ಕಾಲೇಜುಗಳ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ನಗರದ ಮೈಲಾರಪ್ಪ ಮೆಣಸಗಿ ವಿಜ್ಞಾನ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿದ್ದಾರೆ.

ಆದಿಯೋಗಿ ಎಜುಕೇಷನಲ್ ಟ್ರಸ್ಟ್‌ನ ಸಹ ಸಂಸ್ಥೆಯಾದ ಇನ್‌ಸೈಟ್ ಅಕಾಡೆಮಿಯ ತರಬೇತಿಯಲ್ಲಿ ಮೈಲಾರಪ್ಪ ಮೆಣಸಗಿ ಪಿಯು ಕಾಲೇಜಿನ ವಿದ್ಯಾರ್ಥಿಗಳು ಗದಗ ಬಿ ವಲಯದ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಬಾಲಕರ ಮತ್ತು ಬಾಲಕಿಯರ ಶೆಟಲ್ ಬ್ಯಾಡ್ಮಿಂಟನ್, ಬಾಲಕಿಯರ ಥ್ರೋಬಾಲ್ ಹಾಗೂ ಚೆಸ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.




ಮೈಲಾರಪ್ಪ ಮೆಣಸಗಿ ಮೆಮೋರಿಯಲ್ ಟ್ರಸ್ಟ್‌ನ ಕಾರ್ಯಾಧ್ಯಕ್ಷ ಡಾ. ಜಯದೇವ ಮೆಣಸಗಿ ಹಾಗೂ ಆಡಳಿತ ಮಂಡಳಿಯವರು ವಿದ್ಯಾರ್ಥಿಗಳಿಗೆ ಮತ್ತು ಉತ್ತಮ ತರಬೇತಿ ನೀಡಿದ ಅಕಾಡೆಮಿ ಸದಸ್ಯರಿಗೆ, ಕಾಲೇಜು ಸಿಬ್ಬಂದಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಆದಿಯೋಗಿ ಎಜುಕೇಷನಲ್ ಟ್ರಸ್ಟ್‌ನ ಅಧ್ಯಕ್ಷ ಶ್ರೀಕಾಂತಗೌಡ ಪಾಟೀಲ್, ಪವನ್ ಕುಮಾರ್ ಶೇಠ್, ಕುಮಾರ್ ರಾಥೋಡ್, ಎನ್.ಎಂ. ಮುಲ್ಲಾ, ಶರಣು ಮರಗುದ್ದಿ, ವಸೀಂ ರಾಜ್ ದೊಡ್ಡಮನಿ ಪ್ರಾಚಾರ್ಯ ಶರತ್ ಕುಮಾರ್ ವಿಜೇತ ವಿದ್ಯಾರ್ಥಿಗಳಿಗೆ ಅಭಿನಂದಿಸಿ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಸಾಧನೆ ತೋರುವಂತೆ ಶುಭಕೋರಿದರು.

# ತಾಂತ್ರಿಕ ಸಮಸ್ಯೆ: ಗಣತಿದಾರರ ಪರದಾಟ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ರಾಜ್ಯದಲ್ಲಿ ಆರಂಭಗೊಂಡ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಗಣತಿ ಮೊಬೈಲ್ ಆ್ಯಪ್‌ನಲ್ಲಿ ತಾಂತ್ರಿಕ ದೋಷದಿಂದ ಗಣತಿದಾರರು ಪರದಾಡುತ್ತಿದ್ದಾರೆ. ಗಣತಿ ಮಾಡಬೇಕಾದ ಮನೆಗಳಿಗೆ ಅಂಟಿಸಿದ ಯುಎಚ್‌ಐಡಿ ಸಂಖ್ಯೆಗೂ ಆ ಮನೆಯಲ್ಲಿರುವ ಸದಸ್ಯರಿಗೂ ಬೇರೆ ಬೇರೆ ಸ್ಥಳ ಇರುವುದರಿಂದ ಗಣತಿದಾರರಿಗೆ ಒಂದರ ಮೇಲೊಂದರಂತೆ ಸಮಸ್ಯೆ ಉದ್ಭವಿಸಿ, ಗಣತಿ ಆಗದೇ ಕೈಕಟ್ಟಿಕೊಳ್ಳುವ ಸ್ಥಿತಿ ನಿರ್ಮಾಣಗೊಂಡಿದೆ.

ಗಣತಿದಾರರಿಗೆಮೊಬೈಲ್ ನೆಟ್‌ವರ್ಕ್ ದೊಡ್ಡ ಸಮಸ್ಯೆಯಾಗಿದ್ದು, ನಿತ್ಯ ಒಂದು ಅಥವಾ ಎರಡು ಮನೆಗಳ ಗಣತಿ ಮಾಡಲೂ ಆಗದೇ ಶಿಕ್ಷಕರು ಪರದಾಡುತ್ತಿದ್ದಾರೆ. ಪ್ರತಿ ವರ್ಷ ದಸರಾ ರಜೆಯಿಂದ ಸ್ವಲ್ಪ ನಿರಾಳವಾಗಿ ಹಬ್ಬವನ್ನು ಆಚರಿಸುವ ಮೂಲಕ ಶಿಕ್ಷಕರು ಕೆಲವು ದಿನಗಳ ಬ್ರೇಕ್ ಪಡೆದು ಮತ್ತೆ ಕರ್ತವ್ಯಕ್ಕೆ ಹಾಜರಾಗುತ್ತಿದ್ದರು. ಆದರೆ ಈ ವರ್ಷ ಶಿಕ್ಷಕರಿಗೆ ಈ ರೀತಿ ಶಿಕ್ಷೆ ಆಗಿರುವುದು ಒಂದೆಡೆಯಾದರೆ, 15 ದಿನಗಳಲ್ಲಿ 100ರಿಂದ 150 ಮನೆಗಳ ಗಣತಿ ಕಾರ್ಯ ದೊಡ್ಡ ಸಮಸ್ಯೆಯಾಗಿ ಕಾಡುತ್ತಿದೆ.



# ನೇರಸಾಲ ಯೋಜನೆಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗದವರು ಸ್ವಯಂ ಉದ್ಯೋಗ ಕೈಗೊಳ್ಳಲು ನೇರಸಾಲ ಹಾಗೂ ಸಹಾಯಧನ ಮಂಜೂರು ಮಾಡಲು ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ, ಇತ್ಯಾದಿ ವ್ಯಾಪಾರ–ವಹಿವಾಟುಗಳನ್ನು ಕೈಗೊಳ್ಳಲು ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಕನಿಷ್ಟ 1.00 ಲಕ್ಷ ಹಾಗೂ ಗರಿಷ್ಟ 2.00 ಲಕ್ಷ ರೂ.ಗಳ ವರೆಗೆ ಆರ್ಥಿಕ ನೆರವು ಒದಗಿಸಲಾಗುವುದು. ಅರ್ಜಿದಾರರು ಬ್ರಾಹ್ಮಣ ಸಮುದಾಯದ 18 ರಿಂದ 65 ವಯಸ್ಸಿನೊಳಗಿನ ಸಾಮಾನ್ಯ ವರ್ಗಕ್ಕೆ ಸೇರಿರಬೇಕು, ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣ ಪತ್ರ (EWS) ಹೊಂದಿರಬೇಕು, ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು, ಒಂದು ಕುಟುಂಬದಿಂದ ಒಬ್ಬರು ಮಾತ್ರ ಅರ್ಜಿ ಸಲ್ಲಿಸಬಹುದು. ಮಹಿಳೆಯರಿಗೆ ಶೇ.33%, ವಿಶೇಷಚೇತನರಿಗೆ ಶೇ.5% ಮೀಸಲಾತಿ ಇದ್ದು, ಆಧಾರ್‌ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು, ಬ್ಯಾಂಕ್ ಖಾತೆ ಸೀಡ್ ಆಗಿರಬೇಕು. ಆಸಕ್ತ ಅರ್ಜಿದಾರರು ವೆಬ್‌ಸೈಟ್ : WWW. ksbdb.karnataka.gov.in < http://www.ksbdb.karnataka.gov.in> ಮೂಲಕ ಅಕ್ಟೋಬರ್ 31 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ : 8762249230ಕ್ಕೆ ಸಂಪರ್ಕಿಸಲು ಗದಗ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ಡಾ.ಮಲ್ಲೂರ ಬಸವರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವಿ ಪುರಾಣ ಆರಂಭ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ನವರಾತ್ರಿ ಸಂದರ್ಭದಲ್ಲಿ ದೇವಿಯ ಶಕ್ತಿಯ ಆರಾಧನೆಯಿಂದ ನಮ್ಮೆಲ್ಲರ ಸಂಕಲ್ಪಗಳು ಸಿದ್ಧಿಯಾಗುವುದರಲ್ಲಿ ಸಂದೇಹವಿಲ್ಲ ಎಂದು ಅಲ್ಲಮಪ್ರಭುದೇವರ ಮಠದ ಸಿದ್ಧಲಿಂಗೇಶ್ವರ ಸ್ವಾಮೀಜಿ ಹೇಳಿದರು.

ಇಲ್ಲಿಯ ಗ್ರಾಮ ದೇವತೆ ದೇವಸ್ಥಾನದಲ್ಲಿ ಶರನ್ನವರಾತ್ರಿ ಅಂಗವಾಗಿ ಹಮ್ಮಿಕೊಂಡ 46ನೇ ವರ್ಷದ ದೇವಿ ಪುರಾಣವನ್ನು ಘಟಸ್ಥಾಪನೆ ಮಾಡುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿ ವರ್ಷ ದೇವಿ ಪುರಾಣವನ್ನು ಆಲಿಸುತ್ತೇವೆ.



ಅದರಲ್ಲಿಯ ತತ್ವದಾರ್ಶಗಳನ್ನು ಅಳವಡಿಸಿಕೊಂಡು ದೇವಿಯ ಕೃಪಾಶೀರ್ವಾದಕ್ಕೆ ಪಾತ್ರರಾಗಬೇಕು ಎಂದರು.

ಗದಗ ವೀರೇಶ್ವರ ಪುಣ್ಯಾಶ್ರಮದ ವಿಶ್ವನಾಥ ಶಾಸ್ತ್ರೀಗಳು ಪುರಾಣ ಪ್ರವಚನವನ್ನು ಆರಂಭಿಸಿದರು. ಷಡಕ್ಷರಯ್ಯ ಬದ್ನಿಮಠ ಅವರು 1ನೇ ಅಧ್ಯಾಯದ ಪಠಣವನ್ನು ಪ್ರಾರಂಭಿಸಿದರು. ಇವರಿಗೆ ಶಂಕ್ರಪ್ಪ ಬಣವಿ, ಮಲ್ಲಪ್ಪ ಕಲ್ಲೂರ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡಿದರು. ಕುಬೇರಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಪುರಾಣ ಸಮಿತಿಯ ಅಧ್ಯಕ್ಷ ಪ್ರಕಾಶ ಅರಹುಣಸಿ, ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ, ಬಸವರಾಜ ಭೂಮಣ್ಣವರ ಶ್ರೀಶೈಲಗೌಡ ಪಾಟೀಲ, ಚನ್ನಪ್ಪ ಬಣವಿ, ಚಂದ್ರು ಬಣವಿ, ಮಲ್ಲಪ್ಪ ಗುರಿಕಾರ ಇದ್ದರು.

### ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 2ನೇ ದಿನದ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಯುವಶಕ್ತಿ ದೇಶದ ಬಲು ದೊಡ್ಡ ಆಸ್ತಿ

**■ವಿಜಯಸಾಕ್ಷಿ ಸುದ್ದಿ, ಬಸವಕಲ್ಯಾಣ**

ಉದಾತ್ತ ಜೀವನ ಮೌಲ್ಯಗಳನ್ನು ಸಂಪಾದಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ನಿಜವಾದ ಧರ್ಮ. ಪೂರ್ವಜರ ಅನುಭವದ ನುಡಿಗಳು ಯುವ ಜನಾಂಗಕ್ಕೆ ಅಮೂಲ್ಯ ಸಂಪತ್ತು. ಯುವಶಕ್ತಿ ದೇಶದ ಬಲು ದೊಡ್ಡ ಶಕ್ತಿ ಮತ್ತು ಆಸ್ತಿ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 2ನೇ ದಿನದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಲ್ಲಿರುವ ಅಸುರೀ ಗುಣಗಳು ನಾಶವಾಗಿ ದೈವಿ ಗುಣಗಳು ಬಲಗೊಳ್ಳಬೇಕು. ಜನ ಮನ ಜಾಗೃತಿಗೊಳಿಸಲು ಧರ್ಮ ಬೇಕು. ಗುರು ಮಾರ್ಗದರ್ಶನ ಪಡೆಯಲು ಭಾಗ್ಯ ಬೇಕು. ಮನುಷ್ಯನ ಬುದ್ಧಿ ವಿಕಾರಗೊಳ್ಳುವುದರ ಬದಲು ವಿಕಾಸಗೊಂಡರೆ ನಾಡು ನುಡಿ-ಸಂಸ್ಕೃತಿ ಪರಂಪರೆಗಳ ಬೆಳವಣಿಗೆ ಸಾಧ್ಯ. ಪ್ರಗತಿಪರವಾದ ಧ್ಯೇಯೋದ್ದೇಶಗಳು ಮಾನವನ ಶ್ರೇಯಸ್ಸಿಗೆ ದಾರಿದೀಪ ಎಂದರು.

ಯುವಜನಾಂಗಕ್ಕೆ ಆದರ್ಶ ಗುರಿ ಮತ್ತು ಧ್ಯೇಯವಿದ್ದರೆ ಜೀವನದಲ್ಲಿ ಶ್ರೇಯಸ್ಸು ಕಟ್ಟಿಟ್ಟ ಬುತ್ತಿ. 'ರಂಭಾಪುರಿ ಯುವಸಿರಿ' ಪ್ರಶಸ್ತಿ ಪುರಸ್ಕೃತರಾದ ಲಾಡವಂತಿ ಗ್ರಾಮದ ವಿಶ್ವಜಿತ ತಾತೇರಾವ ಢವಳೆಯವರ ಜೀವನವೇ ಇದಕ್ಕೊಂದು ನಿದರ್ಶನ. ಅವರ ಜೀವನದ ಸಾಧನೆ ಮತ್ತು ಪ್ರಯತ್ನ ಯುವ ಜನಾಂಗಕ್ಕೆ ಮಾದರಿ. ನವರಾತ್ರಿಯ ಎರಡನೇ ದಿನದಂದು ದೇವಿಯು ಬ್ರಹ್ಮಚಾರಿಣಿ ಸ್ವರೂಪದಲ್ಲಿ ಪೂಜಿಸಲ್ಪಡುತ್ತಾಳೆ. ಬ್ರಹ್ಮಚಾರಿಣಿ ದೇವಿ ಆರಾಧನೆಯಿಂದ ಮನಸ್ಸು ದೇಹ ಮತ್ತು ಇಂದ್ರಿಯಗಳ ಮೇಲೆ ಪ್ರಭುತ್ವ ಸಾಧಿಸುವ ಶಕ್ತಿ ಬರುತ್ತದೆ. ಕಷ್ಟಕಾಲದಲ್ಲಿ ಮಾನಸಿಕ ಸಮತೋಲನ ಮತ್ತು ಆತ್ಮವಿಶ್ವಾಸ ಉಳಿಸಿಕೊಳ್ಳಲು ನೆರವಾಗುತ್ತದೆ ಎಂದರು.

ಹುಡಗಿ ಸಂಸ್ಥಾನ ಹಿರೇಮಠದ ವಿರೂಪಾಕ್ಷ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಸಮ್ಮುಖ ವಹಿಸಿದ ಶ್ರೀನಿವಾಸ ಸರಡಗಿ ಡಾ. ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನುಷ್ಯ ಅರಿತು ಬಾಳುವುದರಲ್ಲಿ ಸುಖ-ಶಾಂತಿಯಿದೆ. ಬದುಕಿನ ಉತ್ಕರ್ಷತೆ ಮತ್ತು ಶ್ರೇಯಸ್ಸಿಗೆ ಒಳ್ಳೆಯವರ ನೆರಳಿನಲ್ಲಿ ಬಾಳಿದರೆ ಜೀವನ ವಿಕಾಸಗೊಳ್ಳುವುದು ಎಂದರು.



ಬೀದರ ಲೋಕಸಭಾ ಕ್ಷೇತ್ರದ ಸಂಸದ ಸಾಗರ ಖಂಡ್ರೆ ಮಾತನಾಡಿ, ಶ್ರೀ ರಂಭಾಪುರಿ ಜಗದ್ಗುರುಗಳವರ ದಸರಾ ಧರ್ಮ ಸಮಾರಂಭ ಯುವಕರಿಗೆ ಮಾರ್ಗದರ್ಶನ ನೀಡುತ್ತ ಬಂದಿದೆ. ಯುವಕರೂ ಸಹ ಸಂಸ್ಕಾರವಂತರಾಗಬೇಕು. ಪ್ರತಿಯೊಬ್ಬರೂ ಸಹೋದರ ಭಾವದಿಂದ ಬಾಳಿದಾಗ ಸಮಾಜದಲ್ಲಿ ಸದ್ಭಾವನೆ ಬೆಳೆಯಲು ಸಾಧ್ಯವೆಂದರು.

ಮಾಜಿ ಎಮ್.ಎಲ್.ಸಿ ವಿಜಯಸಿಂಗ ಧರ್ಮಸಿಂಗ, ಮಾಜಿ ಸಚಿವ ಬಸವರಾಜ ಪಾಟೀಲ ಅಟ್ಟೂರ, ಕೆ.ಪಿ.ಸಿ.ಸಿ ಸಹಕಾರ ವಿಭಾಗದ ಅಧ್ಯಕ್ಷ ಧನರಾಜ ತಾಳಂಪಳ್ಳಿ, ಬೀದರ ಕೆಪಿಸಿಸಿ ಘಟಕದ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬಸವೇಶ್ವರ ದೇವಸ್ಥಾನ ವಿಶ್ವಸ್ಥ ಸಮಿತಿ ಅಧ್ಯಕ್ಷ ಶಶಿಕಾಂತ ದುರ್ಗೆ, ಬಸವಕಲ್ಯಾಣದ ಆನಂದ ದೇವಪ್ಪ, ಬಸವರಾಜ ಸ್ವಾಮಿ ವಿಶ್ವ ಡೆವಲಪರ್ಸ್, ಅರ್ಜುನ ಕನಕ, ಮನೋಹರ ಮೈಸೆ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಬಸವಕಲ್ಯಾಣ ವೀರಶೈವ ಸದ್ಬೋಧನಾ ಸಂಸ್ಥೆಯ ಅಧ್ಯಕ್ಷ ಡಾ ಬಸವರಾಜ ಸ್ವಾಮಿ ಇವರಿಂದ ಸ್ವಾಗತ, ಬಸವಕಲ್ಯಾಣದ ಸ್ನೇಹ ಸರಡಗಿ ಇವರಿಂದ ಭರತ ನಾಟ್ಯ ಪ್ರದರ್ಶನ ಜರುಗಿತು. ಗುರುಲಿಂಗಯ್ಯಾ ಹಿತ್ತಲಶಿರೂರ ಮತ್ತು ರಾಜಶ್ರೀ ದಿಲೀಪಸ್ವಾಮಿ ಇವರಿಂದ ಸಂಗೀತ ಜರುಗಿ-ತು. ಶಿವಮೊಗ್ಗದ ಶಾಂತಾ ಆನಂದ, ರಮೇಶ ರಾಜೋಳೆ ಶಿವಪೂರ ನಿರೂಪಿಸಿದರು. ಶ್ರೀ ಚನ್ನಬಸವೇಶ್ವರ ಹಿರೇಮಠ ಸಂಸ್ಥಾನ ಸುಕ್ಷೇತ್ರ ಹಾರಕೂಡ ಇವರಿಂದ ಅನ್ನ ದಾಸೋಹ ಜರುಗಿತು.

ಬೆಳಗುಂಪಾ ಹಿರೇಮಠದ ಅಭಿನವ ಪರ್ವತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಅಜ್ಞಾನದಲ್ಲಿ ಮಲಗಿದ ಜನರನ್ನು ಎಚ್ಚರಿಸಲು ಕಾಲ ಕಾಲಕ್ಕೆ ಆಚಾರ್ಯರು ಋಷಿಮುನಿಗಳು, ಶರಣ ಸಂತ ಮಹಂತರು ಅವತರಿಸಿ ಬಾಳಿಗೆ ಬೆಳಕು ತೋರಿದ್ದಾರೆ. ಸತ್ಯ ಶುದ್ಧವಾದ ಜೀವನ ಮೌಲ್ಯಗಳನ್ನು ಪರಿಪಾಲಿಸಿಕೊಂಡು ಯುವ ಜನಾಂಗ ಬೆಳೆದರೆ ಬೆಲೆ ಮತ್ತು ನೆಲೆ ಪ್ರಾಪ್ತವಾಗುತ್ತದೆ ಎಂದರು.

### ಗದಗ ಎಸ್ಎಸ್‌ಕೆ ಸಮಾಜದಿಂದ 'ನಮ್ಮೂರ ದಸರಾ-2025' ಕಾರ್ಯಕ್ರಮ

# ಎಸ್‌ಎಸ್‌ಕೆ ಸಮಾಜದ ಒಗ್ಗಟ್ಟು ಎಲ್ಲರಿಗೂ ಮಾದರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಎಸ್.ಎಸ್‌ಕೆ ಸಮಾಜದ ಒಗ್ಗಟ್ಟು ಇತರೆ ಸಮಾಜಗಳಿಗೆ ಮಾದರಿಯಾಗಿದೆ ಎಂದು ರಿಯಲ್ ಎಸ್ಟೇಟ್ ಉದ್ಯಮಿ ಸಂಗಮೇಶ ಕವಳಿಕಾಯಿ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ್ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ-2025ರ ಮೊದಲನೆ ದಿನದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಎಸ್ಎಸ್‌ಕೆ ಸಮಾಜಕ್ಕೆ ಲಿಪಿ ಇಲ್ಲದಿದ್ದರೂ ಅವರ ಭಾಷೆ ಗಟ್ಟಿತನದಿಂದ ಕೂಡಿದೆ. ಅವರಲ್ಲಿನ ಒಗ್ಗಟ್ಟು, ಧರ್ಮ ರಕ್ಷಣೆ ಹಾಗೂ ಸಂಸ್ಕಾರ ಎಲ್ಲರಿಗೂ ಮಾದರಿಯಾಗಿದೆ. ಈ ಸಮಾಜಕ್ಕೂ ನಮ್ಮ ಕುಟುಂಬಕ್ಕೂ ವ'ೂದ'ಲಿನಿಂದ'ಲೂ ಅವಿನಾಭಾವ ಸಂಬಂಧ ಇರುವದರಿಂದ ಮುಂದಿನ ದಿನಗಳಲ್ಲಿ ನಾನು ಈ ಸಮಾಜಕ್ಕೆ ಸಹಾಯ-ಸಹಕಾರ ನೀಡುವದಾಗಿ ಭರವಸೆ ನೀಡಿದರು.




ಪಂಚ ಕಮಿಟಿ ಸಹ ಕಾರ್ಯದರ್ಶಿ ರವಿ ಶಿದ್ಲಿಂಗ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಗಣ್ಯ ಉದ್ಯಮಿಗಳಾದ ಸಾಗರ ಪವಾರ, ವಿನಾಯಕ ಹಬೀಬ, ಎಸ್ಎಸ್‌ಕೆ ಸಮಾಜದ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ದಸರಾ ಕಮಿಟಿ ಚೇರಮನ್ ಅನಿಲ್ ಖಟವಟೆ ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಎಸ್ಎಸ್‌ಕೆ ಸಮಾಜದ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಮಾತನಾಡಿ, ನಮ್ಮೂರ ದಸರಾ ಕಾರ್ಯಕ್ರಮವನ್ನು ಸಮಾಜದ ಯುವಕರು ಅತ್ಯಂತ ವಿಜೃಂಭಣೆಯಿಂದ ಆಚರಿಸಿಕೊಂಡು ಬರುತ್ತಿರುವದು ಸಂತಸ ತಂದಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಂಚ ಕಮಿಟಿ ಸದಸ್ಯರಾದ ವಿಶ್ವನಾಥಸಾ ಖಟವಟೆ, ಸುರೇಶಕುಮಾರ ಬದಿ, ಬಲರಾಮ ಬಸವಾ, ಶ್ರೀನಿವಾಸ ಬಾಂಡಗೆ, ಪರಶುರಾಮ ಬದಿ, ಮಾರುತಿ ಪವಾರ, ಗಂಗಾಧರ ಹಬೀಬ, ಅಂಬಾಸಾ ಖಟವಟೆ, ಮೋತಿಲಾಲಸಾ ಪೂಜಾರಿ, ತರುಣ ಸಂಘದ ವಿಶ್ವನಾಥಸಾ ಸೂಳಂಕಿ, ಶ್ರೀನಿವಾಸ ಬಾಂಡಗೆ, ಶ್ರೀಕಾಂತ ಬಾಕಳೆ, ಮಾಧು ಬದಿ, ನಾಗರಾಜ ಖೋಡೆ, ಸುಧೀರ ಕಾಟಿಗರ, ಸಂದೀಪ ಕಬಾಡಿ, ಎಸ್ಎಸ್‌ಕೆ ಸಮಾಜದ ಮಹಿಳಾ ಮಂಡಳದ ಅಧ್ಯಕ್ಷೆ ಉಮಾಬಾಯಿ ಬೇವಿನಕಟ್ಟಿ, ಸ್ನೇಹಲತಾ ಕಬಾಡಿ, ಕಸ್ತೂರಿಬಾಯಿ ಬಾಂಡಗೆ, ಗೀತಾಬಾಯಿ ಹಬೀಬ ಮುಂತಾದವರು ಉಪಸ್ಥಿತರಿದ್ದರು.

ರಾಘು ಬಾರಡ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಪ್ರಕಾಶ ಬಾಕಳೆ ವಂದಿಸಿದರು.

# ಪೌರ ಕಾರ್ಮಿಕರ ಸೇವೆ ಶ್ಲಾಘನೀಯ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ನಿತ್ಯವೂ ಪಟ್ಟಣದ ಎಲ್ಲ ವಾರ್ಡ್‌ಗಳಲ್ಲಿ ಪೌರಕಾರ್ಮಿಕರು ಸ್ವಚ್ಛತೆಯೊಂದಿಗೆ ಸಾರ್ವಜನಿಕರ ಆರೋಗ್ಯಕ್ಕಾಗಿ ಶ್ರಮಿಸುತ್ತಿದ್ದು, ಪೌರಕಾರ್ಮಿಕರ ಸೇವೆ ಶ್ಲಾಘನೀಯ. ಪೌರಕಾರ್ಮಿಕರಿಗೆ ಸರಕಾರ ಕೊಡಮಾಡುವ ಎಲ್ಲ ಸಹಾಯ, ಸೌಲಭ್ಯಗಳನ್ನು ತಲುಪಿಸಲಾಗುತ್ತಿದೆ ಎಂದು ಮುಖ್ಯಾಧಿಕಾರಿ ಸವಿತಾ ತಾಂಬ್ರೆ ಹೇಳಿದರು.

ಅವರು ಶಿರಹಟ್ಟಿಯಲ್ಲಿ ಮಂಗಳವಾರ ಪೌರಕಾರ್ಮಿಕರ ದಿನಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ಬೃಹತ್ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು.

ಬಸವೇಶ್ವರ ವೃತ್ತದಿಂದ ಪ್ರಾರಂಭವಾದ ಮೆರವಣಿಗೆಯಲ್ಲಿ ಪೌರಕಾರ್ಮಿಕರು ಹಾಡಿಗೆ ಹೆಜ್ಜೆ ಹಾಕಿ ಸಂಭ್ರಮಿಸಿದರು. ಇವರಿಗೆ ಕಚೇರಿಯ ಸಿಬ್ಬಂದಿಗಳು ಕೂಡ ಸಾಥ್ ನೀಡಿದರು.

ಪ.ಪಂ ಅಧ್ಯಕ್ಷೆ ದೇವಕ್ಕ ಗುಡಿಮನಿ, ಉಪಾಧ್ಯಕ್ಷೆ ನೀಲವ್ವ ಹುಬ್ಬಳ್ಳಿ, ಸ್ಥಾಯಿ ಸಮಿತಿ ಅಧ್ಯಕ್ಷ ಹೊನ್ನಪ್ಪ ಶಿರಹಟ್ಟಿ, ಉಡಚಪ್ಪ ನೀಲಣ್ಣವರ ಸೇರಿದಂತೆ ಎಲ್ಲ ಪೌರಕಾರ್ಮಿಕರು ಹಾಗೂ ಕಚೇರಿಯ ಸಿಬ್ಬಂದಿ ಉಪಸ್ಥಿತರಿದ್ದರು.

### ಝಡ್.ಇ.ಡಿ, ಲೀನ್ ಯೋಜನೆ, ರಫ್ತು ಕುರಿತ ಒಂದು ದಿನದ ಅರಿವು ಕಾರ್ಯಕ್ರಮ

# ಗುಣಮಟ್ಟದ ವಸ್ತುಗಳನ್ನು ಉತ್ಪಾದಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಎಂ.ಎಸ್.ಎಂ.ಇಗಳು ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳುವ ಮೂಲಕ ಉತ್ತಮ ಗುಣಮಟ್ಟದ ವಸ್ತುಗಳನ್ನು ಉತ್ಪಾದಿಸಲು ಮಹತ್ವ ನೀಡಬೇಕೆಂದು ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಉಪಾಧ್ಯಕ್ಷ ನಿಂಗಣ್ಣ ಬಿರಾದಾರ ಹೇಳಿದರು.

ಜಿಲ್ಲಾ ಕೈಗಾರಿಕಾ ಕೇಂದ್ರ ಗದಗ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ, ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಬೆಂಗಳೂರು ಹಾಗೂ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಹಯೋಗದಲ್ಲಿ ಜರುಗಿದ ರ್‍ಯಾಂಪ್ ಯೋಜನೆಯಡಿಯಲ್ಲಿ ಝಡ್.ಇ.ಡಿ., ಲೀನ್ ಯೋಜನೆ ಹಾಗೂ ರಫ್ತು ಕುರಿತ ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಂ.ಎಸ್.ಎಂ.ಇ ಉದ್ದಿಮೆದಾರರು ಲೀನ್ ಯೋಜನೆ, ಝಡ್.ಇ.ಡಿ. ಸರ್ಟಿಫಿಕೇಶನ್ ಪಡೆಯಲು ಬೇಕಾಗಿರುವ ಅಂಶಗಳನ್ನು ಅಳವಡಿಸಿಕೊಂಡು ಉತ್ತಮ ಉತ್ಪಾದನಾ ಕ್ರಮಗಳು, ವ್ಯರ್ಥವಾಗುವದನ್ನು ಕಡಿಮೆ ಮಾಡುವುದು, ಪರಿಸರ ಹಾನಿಯಾಗದಂತೆ, ಕಚ್ಚಾ ಸಾಮಗ್ರಿಗಳನ್ನು ಉತ್ತಮ ರೀತಿಯಿಂದ ಉಪಯೋಗಿಸಿ ಗುಣಮಟ್ಟದ ವಸ್ತುಗಳನ್ನು ಉತ್ಪಾದನೆ ಮಾಡಬೇಕೆಂದು ತಿಳಿಸಿದರು.



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಎಸ್.ಗುಡಿಮನಿ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರವು ಎಂ.ಎಸ್.ಎಂ.ಇಗಳಿಗೆ ಹಲವಾರು ಯೋಜನೆ ಹಾಗೂ ಉತ್ತೇಜಕಗಳು ನೀಡುತ್ತಿದ್ದು, ಉದ್ದಿಮೆದಾರರು ಈ ಯೋಜನೆಗಳಿಂದ ಪ್ರಯೋಜನ ಪಡೆದು ಯಶಸ್ವಿಯಾಗಬೇಕೆಂದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಟಿ.ಎಸ್. ಮಲ್ಲಿಕಾರ್ಜುನ ಮಾತನಾಡಿ, ಎಂ.ಎಸ್.ಎಂ.ಇ ಕ್ಷೇತ್ರವು ಕೃಷಿ ನಂತರ ಎರಡನೇ ಹೆಚ್ಚು ಉದ್ಯೋಗ ಅವಕಾಶವನ್ನು ಕಲ್ಪಿಸುತ್ತಿದೆ. ಕರ್ನಾಟಕದಲ್ಲಿ 38 ಲಕ್ಷ ಎಂ.ಎಸ್.ಎಂ.ಇ. ಘಟಕಗಳು ಇದ್ದು, ಅಂದಾಜು 55 ಲಕ್ಷ ಉದ್ಯೋಗಗಳನ್ನು ಸೃಷ್ಟಿಸಿದೆ ಎಂದರು.

ಕಾಶಿಯಾ ಜಂಟಿ ಕಾರ್ಯದರ್ಶಿ ಆರ್. ಕೇಶವಮೂರ್ತಿ ಸ್ವಾಗತಿಸಿ ನಿರೂಪಿಸಿದರು. ಕಾಶಿಯಾದ ಪ್ಯಾನಲ್ ಸದಸ್ಯ ನಾಗರಾಜ ಯಲಿಗಾರ ವಂದಿಸಿದರು. ಈ ಕಾರ್‍ಯಕ್ರಮದಲ್ಲಿ ಸುಮಾರು 100ಕ್ಕೂ ಹೆಚ್ಚಿನ ಎಂ.ಎಸ್.ಎಂ.ಇ ಉದ್ದಿಮೆದಾರರು, ವ್ಯಾಪಾರಸ್ಥರು, ಆದರ್ಶ ಶಿಕ್ಷಣ ಸಂಸ್ಥೆ, ಜಗದ್ಗುರು ತೋಂಟದಾರ್ಯ ಕಾಲೇಜು ಹಾಗೂ ಮನೋರಮಾ ಕಾಲೇಜುಗಳ ಅಂತಿಮ ವರ್ಷದ ವಿದ್ಯಾರ್ಥಿಗಳು, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸದಸ್ಯರು ಮತ್ತು ವಿವಿಧ ಕೈಗಾರಿಕಾ ಸಂಘ-ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ತಿಳಿಸಿದ್ದಾರೆ.

# ದಶಕದ ಕನಸು ಸಾಕಾರ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಪಶು ಆಸ್ಪತ್ರೆ ನಿರ್ಮಾಣದ ದಶಕದ ಕನಸು ಸಾಕಾರಗೊಂಡಿದೆ. ಗ್ರಾಮದ ಅನೇಕ ಮುಖಂಡರು ಪಶು ಆಸ್ಪತ್ರೆ ಬಗ್ಗೆ ಮನವಿ ಮಾಡಿದ್ದರು, ಸರಕಾರದ ಮಟ್ಟದಲ್ಲಿ ಸತತ ಪ್ರಯತ್ನ ನಡೆಸಿದ್ದರ ಫಲವಾಗಿ ಇಂದು ಆಸ್ಪತ್ರೆ ನಿರ್ಮಾಣಕ್ಕೆ ಚಾಲನೆ ನೀಡಲಾಗುತ್ತಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು. ಅವರು ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ 2024-25ನೇ ಸಾಲಿನ ಆರ್‌ಐಡಿಎಫ್ ಯೋಜನೆಯಡಿಯಲ್ಲಿ ಪಶು ಆಸ್ಪತ್ರೆ ನಿರ್ಮಾಣಕ್ಕೆ ಚಾಲನೆ ನೀಡಿ ಮಾತನಾಡಿದರು.

ಬನ್ನಿಕೊಪ್ಪ ಸೇರಿದಂತೆ ಸುತ್ತಮುತ್ತಲಿನ ಬಹುತೇಕರು ಕೃಷಿ ಅವಲಂಬಿತರಾಗಿದ್ದು, ಮುಂಬರುವ ದಿನಗಳಲ್ಲಿ ಕೃಷಿ ಕಾಯಕದಲ್ಲಿ ನಿರತವಾಗುವ ಜಾನುವಾರುಗಳಿಗೆ ನಿಗದಿತ ಸಮಯದಲ್ಲಿ ಚಿಕಿತ್ಸೆ ಲಭಿಸಲು ಎಲ್ಲ ರೀತಿಯ ಕ್ರಮ ಕೈಕೊಳ್ಳಲಾಗುವದು. ಜಾನುವಾರುಗಳ ಸುರಕ್ಷತೆಗೂ ಸಹ ಆದ್ಯತೆ ನೀಡುವ ದೃಷ್ಟಿಯಿಂದ ಆಸ್ಪತ್ರೆ ನಿರ್ಮಾಣವಾಗಲಿದೆ. ಗುತ್ತಿಗೆದಾರರು ನಿಯಮಾನುಸಾರ ನಿಗದಿತ ಸಮಯದಲ್ಲಿ ಗುಣಮಟ್ಟದ ಕಾಮಗಾರಿಯನ್ನು ಮಾಡಿ ದೀರ್ಘಕಾಲ ಬಾಳಿಕೆ ಬರುವಂತೆ ಕೆಲಸವನ್ನು ಮಾಡಬೇಕೆಂದು ಹೇಳಿದರು.

ಗ್ರಾ.ಪಂ ಅಧ್ಯಕ್ಷೆ ಶ್ರೀರಕ್ಷಾ ವೇರ್ಣೆಕರ, ಗ್ರಾ.ಪಂ ಸದಸ್ಯ ರಮೇಶ ಕರಾಟೆ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಬೆಳ್ಳಟ್ಟಿ ಗ್ರಾ.ಪಂ ಸದಸ್ಯರಾದ ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಪರಪ್ಪ ಹೊನಗಣ್ಣವರ, ಶಂಕರ ಮರಾಠೆ, ರೇಣುಕಾ ಕಬಾಡರ, ಮಹಾವೀರ ಮಂಟಗಣಿ, ಲಕ್ಷ್ಮಣ ವಗ್ಗರ, ಬಸವರಾಜ ಬಳಿಗಾರ, ಗುಡದೀರಪ್ಪ ಹಂಶಿ, ಶಿವು ಗೌಡನಾಯ್ಕರ, ಪ್ರಸಾದ ಕಲಾಲ, ಸುನಂದಾ ಕರಡಿ, ಮಂಜಪ್ಪ ಕಮತರ, ಕಾಶೀನಾಥ ಗಿಡ್ಡವೀರಪ್ಪನವರ, ವಿರೂಪಾಕ್ಷ ಮಾಗಡಿ, ನಿಂಗಪ್ಪ ವಡ್ಡಟ್ಟಿ, ಶಿವಪ್ಪ ಅಕ್ಕಿ ಮುಂತಾದವರು ಉಪಸ್ಥಿತರಿದ್ದರು.



ಗದಗ: ದಸರಾ ಹಬ್ಬದ ಸಂಭ್ರಮದ ನಿಮಿತ್ತ ಗದಗ ನಗರದ ವಿಡಿಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಸಿಬಿಎಸ್ಇ ಶಾಲೆಯ ಗುರು ಮಾತೆಯರು ನವರಾತ್ರಿಯ ಎರಡನೇ ದಿನ ಕೆಂಪು ವರ್ಣದ ಸೀರೆಯನ್ನುಟ್ಟು ಸಂಭ್ರಮಿಸಿದರು.

# ಸಿದ್ಧಲಿಂಗ ನಗರದಲ್ಲಿ 'ನಮ್ಮೂರ ದಸರಾ'

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಸಿದ್ಧಲಿಂಗ ನಗರದ ನೀರಿನ ಟ್ಯಾಂಕ್ ಬಳಿಯ ಶ್ರೀ ಬನ್ನಿಮಹಾಂಕಾಳಿ ದೇವಸ್ಥಾನದಲ್ಲಿ ನಮ್ಮೂರ ದಸರಾ ಉತ್ಸವ ಸೆ. 21ರಿಂದ ಅ. 2ರವರೆಗೆ ವಿಜೃಂಭಣೆಯಿಂದ ಜರುಗಲಿದೆ.

ಶ್ರೀ ಬನ್ನಿ ಮಹಾಂಕಾಳಿ ಟ್ರಸ್ಟ್ ಕಮಿಟಿ, ಮಹಿಳಾ ಟ್ರಸ್ಟ್ ಕಮಿಟಿ ಮತ್ತು ತರುಣ ಯುವಕ ಸಂಘದ ಸಹಯೋಗದಲ್ಲಿ ಸೆ. 22ರಂದು ಘಟಸ್ಥಾಪನೆ ಜರುಗಿದ್ದು, ಸೆ. 27ರ ಸಾಯಂಕಾಲ 6.30ಕ್ಕೆ ದಾಂಡಿಂ-ಯಾ ಕಾರ್ಯಕ್ರಮ, ಸೆ. 28ರ ಬೆಳಿಗ್ಗೆ 9 ಗಂಟೆಗೆ ಇನ್ನರ್‌ವೀಲ್ ಗದಗ ಕ್ಲಬ್ ಮಿಡಟೌನ್ ಹಾಗೂ ಶ್ರೀ ಬನ್ನಿಮಹಾಂಕಾಳಿ ಸೇವಾ ಟ್ರಸ್ಟ್‌ನಿಂದ 18ರಿಂದ 35 ವರ್ಷ ವಯಸ್ಸಿನವರಿಗಾಗಿ ರಂಗೋಲಿ ಸ್ಪರ್ಧೆ, 8ರಿಂದ 16 ವರ್ಷ ವಯಸ್ಸಿನವರಿಗಾಗಿ ಭಾವಗೀತೆ ಹಾಗೂ ಬಾಗಿಲತೋರಣ ಮಾಡುವ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಸೆ. 30ರಂದು ದುರ್ಗಾಷ್ಟಮಿಯ ನಿಮಿತ್ತ ಬಾಲಮಕ್ಕಳನ್ನು ನವದುರ್ಗೆಯರನ್ನಾಗಿ ಶೃಂಗರಿಸಿ ಬೆಳಿಗ್ಗೆ 11 ಗಂಟೆಗೆ ಮುಳಗುಂದ ರಸ್ತೆಯ ಶ್ರೀ ಅಂಬಾಭವಾನಿ ದೇವಸ್ಥಾನಕ್ಕೆ ತೆರಳಿ ಉಡಿ ತುಂಬುವ ಕಾರ್ಯಕ್ರಮ ನಂತರ ಮಹಾ ಅನ್ನಸಂತರ್ಪಣೆ ಜರುಗಲಿದೆ.

ಅ. 1ರಂದು ಮಹಾನವಮಿ, ಆಯುಧಪೂಜೆ, ಅ. 2ರಂದು ವಿಜಯದಶಮಿ ನಿಮಿತ್ತ ಬೆಳಿಗ್ಗೆ 8ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಸಾರ್ವಜನಿಕರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದ್ದು, ಸಾಯಂಕಾಲ 4 ಗಂಟೆಗೆ ದೇವಸ್ಥಾನದಿಂದ ಪಲ್ಲಕ್ಕಿ ಮೆರವಣಿಗೆ ಮೂಲಕ ನಾಗದೇವತಾ ಮಂಟಪದಲ್ಲಿ ಬನ್ನಿ ಮುಡಿಯುವ, ಸೀಮೋಲ್ಲಂಘನ ಕಾರ್ಯಕ್ರಮ ಜರುಗಲಿದ್ದು, ಸದ್ಭಕ್ತರು ಪಾಲ್ಗೊಳ್ಳುವಂತೆ ಟ್ರಸ್ಟ್‌ನ ಪ್ರಕಟಣೆ ಕೋರಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka